ಸಂಪುಟ : 9 ಸಂಚಿಕೆ 267 ಪುಟ : 4 ಬೆಲೆ: 3.00 ಬುಧವಾರ ಡಿಸೆಂಬರ್ 4 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ




ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 9 Issue : 267 Pages : 4 Price : 3.00 Wednesday December 4 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ನಾಳೆ ವಿದ್ಯುತ್ ವ್ಯತ್ಯಯ


**■ವಿಜಯಸಾಕ್ಷಿ ಸುದ್ದಿ, ಗದಗ**

110 ಕೆ.ವ್ಹಿ ಬೆಳ್ಳಟ್ಟಿ ಮತ್ತು 110 ಕೆ.ವ್ಹಿ ಬಾಗೇವಾಡಿ ವಿದ್ಯುತ್ ವಿತರಣಾ ಕೇಂದ್ರಗಳಲ್ಲಿ ತ್ರೈಮಾಸಿಕ ನಿರ್ವಹಣಾ ಕಾಮಗಾರಿ ಕೈಗೊಳ್ಳುವುದರಿಂದ ಡಿ.5ರಂದು ಮುಂಜಾನೆ 10 ಗಂಟೆಯಿಂದ ಸಾಯಂಕಾಲ 5.30 ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಲಿದೆ.

ಸದರಿ ಉಪಕೇಂದ್ರಗಳಿಂದ ಪೂರೈಕೆಯಾಗುವ 110 ಕೆ.ವ್ಹಿ. ಬನ್ನಿಕೊಪ್ಪ ವಿಂಡ್, 110ಕೆ.ವ್ಹಿ. ಆದಿತ್ಯ ಬಿರ್ಲಾ ಸೋಲಾರ್, 33 ಕೆ.ವ್ಹಿ. ಜಾಲವಾಡಗಿ ನೀರು ಸರಬರಾಜು ಉಪಕೇಂದ್ರ, 33 ಕೆ.ವ್ಹಿ. ಸೂರಣಗಿ ಉಪಕೇಂದ್ರ ಮತ್ತು 33 ಕೆ.ವ್ಹಿ. ಹೊಳೆಇಟಗಿ ಉಪಕೇಂದ್ರಗಳಿಂದ ಪೂರೈಸಲ್ಪಡುವ ಎಲ್ಲಾ ನಗರ, ಕೈಗಾರಿಕಾ, ನೀರಾವರಿ ಪಂಪ್‌ಸೆಟ್‌ಗಳ ಮಾರ್ಗ, ಕುಡಿಯುವ ನೀರು ಮತ್ತು ಗ್ರಾಮೀಣ ಪ್ರದೇಶಗಳ ಎಲ್ಲಾ 11 ಕೆವ್ಹಿ ವಿತರಣಾ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಕಾರಣ ಸಾರ್ವಜನಿಕರು ಸದರಿ ಪ್ರಕಟಣೆ ಗಮನಿಸಿ ಕಂಪನಿಯೊಂದಿಗೆ ಸಹಕರಿಸಬೇಕಾಗಿ ಪ್ರಕಟಣೆ ತಿಳಿಸಿದೆ.

## ಜಿಲ್ಲಾ ಉಸ್ತುವಾರಿ ಸಚಿವರ ಜಿಲ್ಲಾ ಪ್ರವಾಸ

**■ವಿಜಯಸಾಕ್ಷಿ ಸುದ್ದಿ, ಗದಗ**



ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಅವರು ಡಿಸೆಂಬರ್ 4 ರಂದು ಗದಗ ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದು, ವಿವರ ಈ ಕೆಳಗಿನಂತಿದೆ.

ಡಿಸೆಂಬರ್ 4 ರಂದು ಬೆಳಿಗ್ಗೆ 10 ಗಂಟೆಗೆ ನಗರದ ಲಯನ್ಸ್ ಶಾಲೆ ಆವರಣದಲ್ಲಿನ ಸನ್ಮಾರ್ಗ ಪದವಿ ಪೂರ್ವ ಮಹಾವಿದ್ಯಾಲಯಲ್ಲಿ ಜರುಗುವ 2024-25ನೇ ಸಾಲಿನ ಗದಗ ಜಿಲ್ಲಾ ಮಟ್ಟದ ಯುವಜನೋತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು.

ಬೆಳಿಗ್ಗೆ 10.30 ಗಂಟೆಗೆ ನಗರದ ಡಾ.ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳ ಶಿವಾನುಭವ ಮಂಟಪದಲ್ಲಿ ಸಂತ ರಾಜಕಾರಣಿ ಡಿ ಆರ್ ಪಾಟೀಲ ರವರ ಗ್ರಂಥ ಬಿಡುಗಡೆ ಸಮಾರಂಭದಲ್ಲಿ ಭಾಗವಹಿಸುವರು. ಸಂಜೆ 5 ಗಂಟೆಗೆ ಹುಬ್ಬಳ್ಳಿಗೆ ಪ್ರಯಾಣ ಬೆಳೆಸುವರು ಎಂದು ಸಚಿವರ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

## ಗದಗ-ಬೆಟಗೇರಿ: ನಗರದ ವಿವಿಧೆಡೆ ನೀರು ಪೂರೈಕೆ ವಿವರ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ಅವಳಿ ನಗರದಲ್ಲಿ ಡಿಸೆಂಬರ್ 4 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ: ವಾರ್ಡ್ ನಂ. 21, 22 - ವಿಜಯನಗರ ಶಾಲೆ, ಕರುಗಲ್ ಲೇಔಟ್, ಕಮತರ ಪ್ಲಾಟ್, ಟವರ್ ಕಂಬ, ವಾಲ್ಮೀಕಿ ಭವನ, ಗಾರ್ಡನ್ ಲೈನ್, ಹನುಮಂತ ದೇವರ ಗುಡಿ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 6, 5 - ಹಳ್ಳಿಕೇರಿ ಪ್ಲಾಟ್ 2 ಭಾಗಗಳು, ಗಣೇಶ ನಗರ ಕೆಲವು ಭಾಗಗಳು. ವಾರ್ಡ್ ನಂ. 34 - ಹುಡ್ಕೋ ಭಾಗ, ವಡ್ಡರಗೇರಿ, ಕೊರವರ ಓಣಿ, 46 ಪ್ಲಾಟ್, ಮೂರು ಶಿಳ್ಳಿನ ವಕಾರ, ಶಿವಾನಂದ ಗಾರ್ಡನ್, ಬಸವೇಶ್ವರ ಶಾಲೆ, ಡಿಪೋ ಹಿಂದಿನ ಭಾಗ ಉಳಿದ ಕೆಲವು ಭಾಗಗಳು.

ವಾರ್ಡ್ ನಂ. 30 - ಪುಟ್ಟರಾಜನಗರ, ಕೇಶವ ನಗರ, ಸಂಕಣ್ಣವರ ಲೇಔಟ್ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 19, 20, 21 - ಹಾಳದಿಬ್ಬ, ಕರಿ ದೇವರ ಗುಡಿ, 2 ನಂ ಶಾಲೆ, ಖಾನ ತೋಟ, ಬನ್ನಿಕಟ್ಟಿ 2 ಭಾಗಗಳು, ಹುಲಿಗೆಮ್ಮನ ಗುಡಿ 2 ಭಾಗಗಳು, ಕೊಟ್ಟೂರರ ಲೈನ್ 2 ಭಾಗಗಳು, ಬೇವಿನ ಮರದಮ್ಮ, ಶಕ್ತಿಮಾನ ಉಳಿದ ಕೆಲವು ಭಾಗಗಳು.

ವಾರ್ಡ್ ನಂ. 11, 12 - ಪಿ ಮತ್ತು ಟಿ ಕ್ವಾರ್ಟರ್ಸ್, ಕರಿಯಮ್ಮ ಕಲ್ಲು, ಪಾದಗಟ್ಟಿ, ರಾಘವೇಂದ್ರ ಗುಡಿ, ಗಣಪತಿ ಕಟ್ಟಿ, ಚರ್ಚ ಭಾಗ, ಗಾರ್ಡನ್ ಲೈನ್ ಉಳಿದ ಕೆಲವು ಭಾಗಗಳು.

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಸಂಗ್ರಹಣೆ ಮಾಡಿದ ನಂತರ ಹೊಸ ನೀರು ಸಂಗ್ರಹವಾಗಿರುವುದರಿಂದ ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಎಂದು ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಬಾಲ್ಯವಿವಾಹ, ಪೋಕ್ಸೋ, ಭ್ರೂಣ ಹತ್ಯೆ, ಮಕ್ಕಳ ಸಾಗಾಣಿಕೆ ತಡೆ ತರಬೇತಿ ಕಾರ್ಯಕ್ರಮದಲ್ಲಿ ಶೇಖರಗೌಡ ರಾಮತ್ನಾಳ

# ಮಕ್ಕಳ ರಕ್ಷಣೆ ಪ್ರತಿಯೊಬ್ಬರ ಜವಾಬ್ದಾರಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಮಕ್ಕಳ ರಕ್ಷಣೆ ಕಾರ್ಯದಲ್ಲಿ ಪ್ರತ್ಯಕ್ಷವಾಗಿ ಹಾಗೂ ಪರೋಕ್ಷವಾಗಿ ಬೇರೆ ಬೇರೆ ರೀತಿಯಲ್ಲಿ ವಿವಿಧ ಇಲಾಖೆಗಳು ಕಾರ್ಯನಿರ್ವಹಿಸುತ್ತಿವೆ. ಈ ನಿಟ್ಟಿನಲ್ಲಿ ಮಕ್ಕಳ ರಕ್ಷಣಾ ಕಾರ್ಯದಲ್ಲಿ ಆಸಕ್ತಿ ವಹಿಸಿ, ಕರ್ತವ್ಯ ಚ್ಯುತಿಯಾಗದಂತೆ ಶ್ರದ್ಧೆಯಿಂದ ಕೆಲಸ ನಿರ್ವಹಿಸುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದು ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಶೇಖರಗೌಡ ರಾಮತ್ನಾಳ ತಿಳಿಸಿದರು. ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಮಂಗಳವಾರ ಗದಗ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ, ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಪದವಿಪೂರ್ವ ಶಿಕ್ಷಣ ಇಲಾಖೆ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಇವರುಗಳ ಸಂಯುಕ್ತ ಆಶ್ರಯದಲ್ಲಿ ಜಿಲ್ಲಾ ಹಾಗೂ ತಾಲೂಕು ಮಟ್ಟದ ಅಧಿಕಾರಿ/ಸಿಬ್ಬಂದಿಗಳಿಗೆ ಬಾಲ್ಯವಿವಾಹ, ಪೋಕ್ಸೋ, ಭ್ರೂಣ ಹತ್ಯೆ, ಮಕ್ಕಳ ಸಾಗಾಣಿಕೆ ಮತ್ತು ಮಾರಾಟ ಹಾಗೂ ವಲಸೆ ಕುಟುಂಬದ ಮಕ್ಕಳ ರಕ್ಷಣೆ ಕುರಿತು ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಶಾಲೆ ಹಾಗೂ ಪಿಯು ಕಾಲೇಜುಗಳಲ್ಲಿ ಶಿಕ್ಷಕರು ವಿದ್ಯಾರ್ಥಿಗಳಿಗೆ ಮೌಲ್ಯಯುತ ಶಿಕ್ಷಣ ನೀಡಬೇಕು. ಮಕ್ಕಳೊಂದಿಗೆ ಸಮಾಲೋಚನೆ ನಡೆಸಿ ಅವರ ವಿದ್ಯಾಭ್ಯಾಸಕ್ಕೆ ಹೆಚ್ಚಿನ ಪ್ರೋತ್ಸಾಹ ನೀಡಬೇಕು. ಅಂತಹ ಮಕ್ಕಳು ಭವಿಷ್ಯದಲ್ಲಿ ಉನ್ನತ ಹುದ್ದೆ ಅಲಂಕರಿಸಲು ಸಾಧ್ಯವಾಗುತ್ತದೆ. ಬಾಲ್ಯ ವಿವಾಹದಿಂದ ಉಂಟಾಗುವ ದುಷ್ಪರಿಣಾಮದ ಕುರಿತು ಮಕ್ಕಳಿಗೆ ತಿಳುವಳಿಕೆ ನೀಡಬೇಕು.



ಬಾಲ್ಯ ವಿವಾಹದ ನಿಷೇಧ ಕಾಯ್ದೆ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಉದಾಸೀನ ಮಾಡದೇ ಇಲಾಖೆಗಳ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು ಎಂದರು. ಸಮಾಜಘಾತುಕ ಚಟುವಟಿಕೆಗಳಲ್ಲಿ ತೊಡಗಿಸಲು ಮಕ್ಕಳ ಸಾಗಾಣಿಕೆ ಮತ್ತು ಮಾರಾಟ ಮಾಡಲಾಗುತ್ತದೆ. ಮಕ್ಕಳನ್ನು ಇಂತಹ ಅಪಾಯಕಾರಿ ಸನ್ನಿವೇಶದಿಂದ ರಕ್ಷಣೆ ಮಾಡುವುದು ಎಲ್ಲರ ಜವಾಬ್ದಾರಿಯಾಗಿದೆ. ಮಕ್ಕಳ ಸಹಾಯವಾಣಿ ಸಂಖ್ಯೆ 1098 ಕುರಿತು ಜಾಗೃತಿ ಮೂಡಿಸಬೇಕು. ಆರ್.ಟಿ.ಇ ಕಾಯ್ದೆ ಸರ್ಕಾರದ ಮಹತ್ತರ ಕಾಯ್ದೆಯಾಗಿದ್ದು, ಶಾಲೆಯಲ್ಲಿ ಮಕ್ಕಳ ಹಾಜರಾತಿ ಕಡೆಗೆ ಶಿಕ್ಷಕರು ಹಾಗೂ ಪ್ರಾಚಾರ್ಯರು ಗಮನ ಹರಿಸಬೇಕೆಂದು ಶೇಖರಗೌಡ ರಾಮತ್ನಾಳ ತಿಳಿಸಿದರು.

ವಕೀಲರಾದ ಜೆ.ಸಿ. ರೇಶ್ಮಿ ಮಾತನಾಡುತ್ತಾ, ಬಾಲ್ಯ ವಿವಾಹದಂತಹ ಅನಿಷ್ಟ ಪಿಡುಗು ತಡೆಗಟ್ಟಲು ವಿವಿಧ ಇಲಾಖೆಗಳು ನಿರ್ಲಕ್ಷ್ಯ ವಹಿಸದೇ ಕೆಲಸ ನಿರ್ವಹಿಸಬೇಕು. ಕಾನೂನಿನಲ್ಲಿ ಇರುವ ಅವಕಾಶಗಳು ಗೊತ್ತಿದ್ದರೂ ಸಹಿತ ಅವುಗಳ ಸದ್ಬಳಕೆ ಮಾಡಿಕೊಳ್ಳುವ ಮನೋಭಾವ ಜನರಿಗೆ ಇರಬೇಕು. ಕಾಯ್ದೆ ಜಾರಿ ಮಾಡಿದ ನಂತರ ಅದರ ಪರಿಣಾಮಕಾರಿ ಅನುಷ್ಠಾನವೂ ಸಹ ಮುಖ್ಯವಾಗಿದೆ ಎಂದರು.

ವಕೀಲರಾದ ಗುರುರಾಜ ಗೌರಿ ಪೋಕ್ಸೋ ಕಾಯ್ದೆ 2012 ಕುರಿತು ಉಪನ್ಯಾಸ ನೀಡಿದರು. ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ. ಮಕ್ಕಳ ರಕ್ಷಣಾ ಆಯೋಗದ ಮಾಹಿತಿ ಫಲಕವನ್ನು ಉದ್ಘಾಟಿಸಿದರು. ಕಾರ್ಯಾಗಾರದಲ್ಲಿ ಪದವಿಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಎಸ್.ಬಿ. ಮಸನಾಯಕ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜಿಲ್ಲಾ ನಿರೂಪಣಾಧಿಕಾರಿ ರಾಧಾ ಮಣ್ಣೂರ ಸೇರಿದಂತೆ ವಿವಿಧ ಇಲಾಖೆಯ ಜಿಲ್ಲಾ ಹಾಗೂ ತಾಲೂಕು ಮಟ್ಟದ ಅಧಿಕಾರಿ ಹಾಗೂ ಸಿಬ್ಬಂದಿಗಳು ಹಾಜರಿದ್ದರು.

ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ರಫೀಕಾ ಹಳ್ಳೂರ ಪ್ರಾಸ್ತಾವಿಕವಾಗಿ ಮಾತನಾಡಿ ಅತಿಥಿಗಳನ್ನು ಸ್ವಾಗತಿಸಿದರು. ಮಲ್ಲಪ್ಪ ಹೊಸಳ್ಳಿ ಕಾರ್ಯಕ್ರಮ ನಿರೂಪಿಸಿದರು.

ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ.ಬಿ. ಸಂಕದ ಮಾತನಾಡಿ, ಇಲಾಖೆಯ ಅಧಿಕಾರಿಗಳು ಮಕ್ಕಳ ರಕ್ಷಣಾ ಕಾರ್ಯದಲ್ಲಿ ಮಾನವೀಯತೆಯಿಂದ ಕೆಲಸ ನಿರ್ವಹಿಸಬೇಕಾದ ಅಗತ್ಯತೆಯಿದೆ. ಪೊಲೀಸ್ ಇಲಾಖೆಯಿಂದ ಪ್ರತಿ ಶನಿವಾರ ಬಾಲ್ಯ ವಿವಾಹ ನಿಷೇಧ ಕಾಯ್ದೆ ಕುರಿತಂತೆ ಅರಿವು ಕಾರ್ಯಕ್ರಮಗಳನ್ನು ಮಾಡಲಾಗುತ್ತಿದೆ ಎಂದರು.




### ಡಂಬಳದ ಐತಿಹಾಸಿಕ ಕೆರೆಗೆ ಬಾಗಿನ ಅರ್ಪಿಸಿದ ಸಚಿವ ಎಚ್.ಕೆ. ಪಾಟೀಲ ಭರವಸೆ

# ಡಂಬಳ ಕೆರೆಯ ಅಭಿವೃದ್ಧಿಗೆ ಯೋಜನೆ

**■ವಿಜಯಸಾಕ್ಷಿ ಸುದ್ದಿ, ಡಂಬಳ**

ಐತಿಹಾಸಿಕ ಕೆರೆಗಳಿಗೆ ಈ ಭಾಗದ ಶಾಸಕರಾದ ಜಿ.ಎಸ್. ಪಾಟೀಲರು ಅಭಿವೃದ್ಧಿಯ ನೀಲನಕ್ಷೆ ತಯಾರಿಸಿದ್ದು, ಡಂಬಳ ಕೆರೆಯನ್ನು ಪ್ರವಾಸಿ ತಾಣ ಮಾಡಬೇಕು ಎಂದು ಕೇಳಿದ್ದಾರೆ. ಅದಕ್ಕೆ ಸೂಕ್ತವಾದ ಯೋಜನೆ ರೂಪಿಸುವಂತೆ ಪ್ರವಾಸೋದ್ಯಮ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಲು ಮುಂದಾಗುತ್ತೇನೆ ಎಂದು ಸಚಿವ ಎಚ್.ಕೆ. ಪಾಟೀಲ ಭರವಸೆ ನೀಡಿದರು.

ಡಂಬಳ ಗ್ರಾಮದ ಐತಿಹಾಸಿಕ ಕೆರೆಗೆ ಬಾಗಿನ ಅರ್ಪಿಸಿ ಮಾತನಾಡಿದ ಅವರು, ಯಲ್ಲಮ್ಮನಗುಡ್ಡ ಅಭಿವೃದ್ಧಿಗೆ ಕೇಂದ್ರ ಸರ್ಕಾರ 100 ಕೋಟಿ ರೂ ಹಣ ಬಿಡುಗಡೆ ಮಾಡಿದ್ದು, ಯಲ್ಲಮ್ಮನಗುಡ್ಡದ ಅಭಿವೃದ್ಧಿಗೆ ತ್ವರಿತವಾಗಿ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

ಮುಂಡರಗಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಡಿ.ಡಿ. ಮೋರನಾಳ ಮಾತನಾಡಿ, ರೈತರು, ಕಾರ್ಮಿಕರು ಪ್ರತಿಯೊಬ್ಬರೂ ಮುಖ್ಯವಾಹಿನಿಗೆ ಬರಬೇಕು ಎನ್ನುವ ಹಿನ್ನೆಲೆಯಲ್ಲಿ ಈ ಭಾಗದ ರೈತರಿಗೆ ವರದಾನವಾಗುವಂತೆ ಕೆರೆಗಳನ್ನು ಭರ್ತಿಮಾಡಿದ ಶ್ರೇಯಸ್ಸು ಸಚಿವರಾದ ಎಚ್.ಕೆ. ಪಾಟೀಲರಿಗೆ ಮತ್ತು ಶಾಸಕರಾದ ಜಿ.ಎಸ್. ಪಾಟೀಲರಿಗೆ ಸಲ್ಲುತ್ತದೆ ಎಂದು ಹೇಳಿದರು.



ತಹಸೀಲ್ದಾರ ಎರಿಸ್ವಾಮಿ ಪಿ.ಎಸ್ ಮಾತನಾಡಿದರು. ಶಾಸಕ ಜಿ.ಎಸ್. ಪಾಟೀಲರಿಂದ ಕೃಷಿ ಇಲಾಖೆಯ ಮೂಲಕ ವಿವಿಧ ರಂಟೆ ಕುಂಟೆ, ಒಕ್ಕುವ ಯಂತ್ರ ವಿತರಣೆ ಜರುಗಿತು. ವಿವಿಧ ಇಲಾಖೆಗಳಿಂದ ನೂರಾರು ಫಲಾನುಭವಿಗಳಿಗೆ ಹಕ್ಕುಪತ್ರ, ಆದೇಶ ಪ್ರತಿಗಳನ್ನು ನೀಡಲಾಯಿತು.

ಕಾರ್ಯಕ್ರಮದಲ್ಲಿ ಮಾಜಿ ಶಾಸಕ ರಾಮಕೃಷ್ಣ ದೊಡ್ಡಮನಿ, ಗ್ರಾ.ಪಂ ಅಧ್ಯಕ್ಷೆ ಶಿವಲೀಲಾ ಬಂಡಿಹಾಳ, ಉಪಾಧ್ಯಕ್ಷೆ ಲಕ್ಷ್ಮವ್ವ ಕಾಶಭೋವಿ, ಶೋಭಾ ಮೇಟಿ, ಗೋಣಿಬಸಪ್ಪ ಕೊರ್ಲಹಳ್ಳಿ, ವಿ.ಎಸ್. ಯರಾಶಿ, ಬಸುರಡ್ಡಿ ಬಂಡಿಹಾಳ, ಬಾಬುಸಾಬ ಮೂಲಿಮನಿ, ಬಸುರಾಜ ಪೂಜಾರ, ಸೋಮಣ್ಣ ಗುಡ್ಡದ, ಶರಣು ಬಂಡಿಹಾಳ, ಪುಲಕೇಶಗೌಡ ಪಾಟೀಲ್, ಮರಿಯಪ್ಪ ಸಿದ್ಧಣ್ಣವರ, ಅಬ್ದುಲ್ ಕಲಕೇರಿ, ಜಾಕೀರ ಮೂಲಿಮನಿ, ಭೀಮಪ್ಪ ಗದಗಿನ, ಕುಮಾರಸ್ವಾಮಿ ಹಿರೇಮಠ, ಸುರೇಶ ಗಡಗಿ, ಕನಕಮೂರ್ತಿ ನರೇಗಲ್ಲ, ಅಶೋಕ ಹಡಪದ, ಮಳ್ಳಪ್ಪ ಒಂಟಲಭೋವಿ, ಮರಿತೇಮಪ್ಪ ಆದಮ್ಮನ್ನವರ, ಇಒ ವಿಶ್ವನಾಥ ಹೊಸಮನಿ, ಪಿಡಬ್ಲುಡಿ ನಾಗೇಂದ್ರ ಪಟ್ಟಣಶೆಟ್ಟರ, ವಿವಿಧ ಇಲಾಖೆಯ ಅಧಿಕಾರಿ, ಸಿಬ್ಬಂದಿ ವರ್ಗ, ಪಕ್ಷದ ಕಾರ್ಯಕರ್ತರು ಇದ್ದರು.

ಶಾಸಕ ಜಿ.ಎಸ್. ಪಾಟೀಲ್ ಮಾತನಾಡಿ, ರೈತರು ಆರ್ಥಿಕವಾಗಿ ಸಬಲರಾಗಬೇಕು ಎನ್ನುವ ದೂರದೃಷ್ಟಿಯಿಂದ ಈ ಭಾಗದ ರೈತರಿಗೆ ನೆನೆಗುದಿಗೆ ಬಿದ್ದಿರುವ ಸಿಂಗಟಾಲೂರ ಏತ ನೀರಾವರಿ ಯೋಜನೆಯನ್ನು ಒದಗಿಸುತ್ತೇವೆ ಎಂದಾಗ ಕೆಲವರು ಹಾಸ್ಯಾಸ್ಪದ ರೀತಿ ಮಾತನಾಡಿದ್ದರು. ಆದರೆ 2013ರಲ್ಲಿ ಈ ಭರವಸೆ ನೀಡಿದ್ದ ಮುಖ್ಯಮಂತ್ರಿ ಸಿದ್ಧರಾಮಯ್ಯ ನೇತೃತ್ವದ ಕಾಂಗ್ರೆಸ್ ಸರಕಾರ ಕೆರೆಗಳಿಗೆ ಹಳ್ಳಕೊಳ್ಳಗಳಿಗೆ ನೀರು ಹರಿಸಿ ರೈತರ ಬದುಕನ್ನು ಆರ್ಥಿಕವಾಗಿ ಮುಖ್ಯವಾಹಿನಿಗೆ ತರುವದರ ಮೂಲಕ ನುಡಿದಂತೆ ನಡೆಯುತ್ತಿದೆ ಎಂದರು.

## ಕೆ.ವಿ. ಬಡಿಗೇರರಿಗೆ ರಾಷ್ಟ್ರೀಯ ಫೆಲೋಶಿಫ್

**■ವಿಜಯಸಾಕ್ಷಿ ಸುದ್ದಿ, ಗದಗ**



ಆರೋಗ್ಯ ಇಲಾಖೆಯಲ್ಲಿ ಸರ್ವೋತ್ತಮ ಸೇವೆ ಸಲ್ಲಿಸುತ್ತಿರುವ ಮುಂಡರಗಿ ತಾಲೂಕಾ ಆರೋಗ್ಯ ಅಧಿಕಾರಿಗಳ ಕಾರ್ಯಾಲಯದಲ್ಲಿ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿಗಳಾಗಿ ಸೇವೆ ಸಲ್ಲಿಸುತ್ತಿರುವ ಕೆ.ವಿ. ಬಡಿಗೇರ ದೆಹಲಿಯಲ್ಲಿ ಭಾರತಿಯ ದಲಿತ ಸಾಹಿತ್ಯ ಅಕಾಡೆಮಿಯವರು ಕೊಡಮಾಡುವ ಡಾ. ಬಿ.ಆರ್. ಅಂಬೇಡ್ಕರ್ ರಾಷ್ಟ್ರೀಯ ಫೇಲೊಶಿಪ್ ಪ್ರಶಸ್ತಿಗೆ ಆಯ್ಕೆಯಾಗಿದ್ದು, ಡಿ.8ರಂದು ರಾಷ್ಟ್ರೀಯ ಅಧ್ಯಕ್ಷ ಡಾ. ಸಮನಾಕ್ಷ ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ.

ಪ್ರಶಸ್ತಿಗೆ ಆಯ್ಕೆಯಾದ ಕೆ.ವಿ. ಬಡಿಗೇರರಿಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಾದ ಡಾ. ಎಸ್.ಎಸ್. ನೀಲಗುಂದ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಹಿರಿಯ ಉಪಾಧ್ಯಕ್ಷರಾದ ಸಿದ್ದಪ್ಪ ಲಿಂಗದಾಳ, ಮಲ್ಲಿಕಾರ್ಜುನ ಕಲಕಂಬಿ, ಅಜಯಕುಮಾರ ಕಲಾಲ, ವಾಯ್.ಎನ್. ಕಡೇಮನಿ, ಮತ್ತಪ್ಪ ಹಟ್ಟಿಮನಿ, ಎಸ್.ಬಿ. ಗಡಾದ, ಎಸ್.ಬಿ. ಕವಳಿಕಾಯಿ ಹಾಗೂ ಆರೋಗ್ಯ ಇಲಾಖೆಯ ಸಿಬ್ಬಂದಿ ವರ್ಗದವರು ಅಭಿನಂದನೆಗಳನ್ನು ತಿಳಿಸಿದ್ದಾರೆ ಎಂದು ಶಿದ್ದಪ್ಪ ಲಿಂಗದಾಳ ಪತ್ರಿಕಾ ಪ್ರಕಟಣೆಯ ಮೂಲಕ ತಿಳಿಸಿದ್ದಾರೆ.

## ಮನೆ ನಿರ್ಮಾಣಕ್ಕೆ ಆಗ್ರಹಿಸಿ ಮನವಿ

**■ವಿಜಯಸಾಕ್ಷಿ ಸುದ್ದಿ, ಮುಂಡರಗಿ**

ಮುಂಡರಗಿ ತಾಲೂಕಾ ಸಾರ್ವಜನಿಕ ಹೋರಾಟ ವೇದಿಕೆ ಹಾಗೂ ನಮ್ಮ ಕರ್ನಾಟಕ ರಕ್ಷಣಾ ವೇದಿಕೆಯ ಆಶ್ರಯದಲ್ಲಿ ಆಶ್ರಯ ಮನೆ ನಿರ್ಮಾಣಕ್ಕೆ ಆಗ್ರಹಿಸಿ ಪುರಸಭೆ ಮುಖ್ಯಾಧಿಕಾರಿಗಳಿಗೆ ಮನವಿ ಪತ್ರ ಸಲ್ಲಿಸಲಾಯಿತು.

ವೇದಿಕೆಯ ಸಂಚಾಲಕ ಬಸವರಾಜ ಯಲ್ಲಪ್ಪ ನವಲಗುಂದ ಮಾತನಾಡುತ್ತಾ, ಮುಂಡರಗಿ ಪುರಸಭೆ ವ್ಯಾಪ್ತಿಗೆ ಒಳಪಟ್ಟ ಶಿರೋಳ ಗ್ರಾಮದ ರಿ.ಸ.ನಂ. 24ರ 25 ಎಕರೆ 32 ಗುಂಟೆ ಕೃಷಿ ಜಮೀನಿನಲ್ಲಿ ಇರುವ 1008 ವಿನ್ಯಾಸಗಳಲ್ಲಿ ಕೇಂದ್ರ ಸರ್ಕಾರದ ಪ್ರಧಾನ ಮಂತ್ರಿ ವಸತಿ ಆವಾಸ ಯೋಜನೆಯ ಅನುದಾನದಲ್ಲಿ ರಾಜೀವ್ ಗಾಂಧಿ ವಸತಿ ನಿಗಮ ಬೆಂಗಳೂರು ಇವರು ಡಾ.



ಬಿ.ಆರ್. ಅಂಬೆಡ್ಕರ್ ವಸತಿ ನಿಗಮ ಕೊಳಚೆ ಪ್ರದೇಶ ವಸತಿ ಮಂಡಳಿ ವಾಂಬೆ ವಸತಿ ನಿಗಮ ಅನುದಾನದಲ್ಲಿ ಹಣ ಪಡೆದು ಬಡಾವಣೆಯಲ್ಲಿ ಮೂಲಭೂತ ಸೌಕರ್ಯಗಳು ರಚನೆ ಮಾಡಿ ನಿವೇಶನಗಳನ್ನು ನಿರ್ಮಾಣ ಮಾಡಿ ಆಶ್ರಯ ನಿರ್ಗತಿಕರಿಗೆ ಮನೆ ಹಕ್ಕುಪತ್ರ ಹಂಚಿಕೆ ಮಾಡಬೇಕು ಎಂದು ಹಲವಾರು ಬಾರಿ ಮನವಿಪತ್ರ ಸಲ್ಲಿಸಿದರೂ ಪ್ರಯೋಜನವಾಗಿಲ್ಲ. ಕೂಡಲೇ ಕಾಮಗಾರಿಯನ್ನು ಕೈಗೆತ್ತಿಕೊಳ್ಳುವಂತೆ ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಚಂದ್ರಶೇಖರ ಪೂಜಾರ, ಎಚ್.ಡಿ. ಪೂಜಾರ, ಸೋಮಣ್ಣ ಹೈತಾಪೂರ, ಚಿನ್ನಪ್ಪ ವಡ್ಡಟ್ಟಿ, ಸುರೇಶ ಕುಂಬಾರ, ಮೈನುದ್ದಿನ ಗರಡಿಮನಿ, ವ್ಹಿ.ಎಸ್. ಗಟ್ಟಿ ಮುಂತಾದವರಿದ್ದರು.

ಮುಖ್ಯಾಧಿಕಾರಿ ಶಂಕರ ಹುಲ್ಲಮ್ಮನವರ, ಪುರಸಭೆ ಸದಸ್ಯ ನಾಗರಾಜ ಹೊಂಬಳಗಟ್ಟಿ ಸಮ್ಮುಖದಲ್ಲಿ ಮನವಿಪತ್ರ ಸ್ವೀಕರಿಸಿದರು.

## ಸಾಕ್ಷಿ ಸುಭಾಷಿತ

ದೇವರ ನುಡಿಯನ್ನು ನಿಮ್ಮ ಕಿವಿಯಿಂದಲ್ಲ
ಹೃದಯದಿಂದ ಕೇಳಿಸಿಕೊಳ್ಳಿ

–ಸುಭಾಷಿತ

## ಸಂಪಾದಕೀಯ

# ಉತ್ತರ ಕರ್ನಾಟಕದ ಹಿತ ಕಾಪಾಡಿ

ಬೆಳಗಾವಿ ಸುವರ್ಣ ವಿಧಾನಸೌಧದಲ್ಲಿ ಇದೇ ಡಿಸೆಂಬರ್ 9ರಿಂದ ಚಳಿಗಾಲದ ಅಧಿವೇಶನ ನಡೆಯಲಿದೆ. ಮುಡಾ ಹಗರಣ, ವಕ್ಫ್ ವಿವಾದ, ವಾಲ್ಮೀಕಿ ನಿಗಮದ ಭ್ರಷ್ಟಾಚಾರ ಮತ್ತು ರಾಜ್ಯದ ಮೂರು ವಿಧಾನಸಭೆ ಕ್ಷೇತ್ರಗಳ ಉಪಚುನಾವಣೆ ನಂತರ ನಡೆಯುತ್ತಿರುವ ಅಧಿವೇಶನ ಸಾಕಷ್ಟು ಮಹತ್ವ ಪಡೆದುಕೊಂಡಿದೆ.

ಪ್ರತಿ ಚಳಿಗಾಲದಲ್ಲಿ ನಡೆಯುವ ಬೆಳಗಾವಿ ಅಧಿವೇಶನದಲ್ಲಿ ಈ ಬಾರಿ ಉತ್ತರ ಕರ್ನಾಟಕದ ಸಮಸ್ಯೆಗಳ ಬಗ್ಗೆ ಚರ್ಚೆ ಮಾಡುತ್ತೇವೆ ಎನ್ನುವುದು ಒಂದು ಸಾಲಿನ ಭಾಷಣವನ್ನು ಎಲ್ಲ ಪಕ್ಷದ ನಾಯಕರು ಮಾಡುತ್ತಾರೆ. ಆದರೆ ಕಳೆದೊಂದು ದಶಕದಿಂದ ಉತ್ತರ ಕರ್ನಾಟಕ ಭಾಗದಲ್ಲಿ ಸುವರ್ಣ ವಿಧಾನಸೌಧ ನಿರ್ಮಾಣವಾಗಿದ್ದು ಬಿಟ್ಟರೆ, ಉತ್ತರ ಕರ್ನಾಟಕದ ಅಭಿವೃದ್ಧಿ ಬಗ್ಗೆ ಗಂಭೀರ ಚಿಂತನೆಯೇ ನಡೆದಿಲ್ಲ.

ಪ್ರತಿ ವರ್ಷ ಒಂದಿಲ್ಲೊಂದು ಸಮಸ್ಯೆ, ರಾಜಕೀಯ ಕಾರಣಗಳಿಂದ ಕಲಾಪ ಬಲಿಯಾಗಿದ್ದನ್ನು ರಾಜ್ಯದ ಜನ ಕಂಡಿದ್ದಾರೆ. ಇನ್ನು ಬೆಳಗಾವಿ ಅಧಿವೇಶನ ಎಂದರೆ ಉತ್ತರ ಕರ್ನಾಟಕ ಭಾಗದ ಜನರಿಗೆ ಪ್ರತಿಭಟನೆ ದಾಖಲಿಸುವ ಪ್ರಮುಖ ವೇದಿಕೆ ಎನ್ನುವಂತಾಗಿದೆ. ಪ್ರತಿಭಟನೆ ನಡೆಸುವುದಕ್ಕಾಗಿಯೇ ಸರಕಾರವೇ ವ್ಯವಸ್ಥೆ ಕಲ್ಪಿಸುವಷ್ಟರ ಮಟ್ಟಿಗೆ ಪ್ರತಿಭಟನೆಗಳಿಗೆ ಅವಕಾಶ ನೀಡಲಾಗುತ್ತದೆ.

ಸದನದ ಒಳಗೆ ಉತ್ತರ ಕರ್ನಾಟಕದ ಬಗ್ಗೆ ಚರ್ಚೆಯೂ ಇಲ್ಲ, ಸದನದ ಹೊರಗೆ ನಡೆಯುವ ಹೋರಾಟಕ್ಕೆ ಬೆಲೆಯೂ ಸಿಗುತ್ತಿಲ್ಲ. ಈ ಎಲ್ಲ ವೈರುಧ್ಯಗಳ ಮಧ್ಯೆಯೇ ಮತ್ತೊಮ್ಮೆ ಚಳಿಗಾಲದ ಅಧಿವೇಶನ ಆರಂಭವಾಗಲಿದೆ. ರಾಜ್ಯ ಸರಕಾರ ಸದ್ಯ ನಿರಾಳವಾಗಿದೆ.

ರಾಜ್ಯ ಸರಕಾರ ಮತ್ತು ಮುಖ್ಯಮಂತ್ರಿ ಸಿದ್ದರಾಮಯ್ಯ ಸದ್ಯ ಎಲ್ಲ ಭ್ರಷ್ಟಾಚಾರದ ಹಗರಣಗಳ ಒತ್ತಡದಿಂದ ಹೊರಬಂದಿದ್ದಾರೆ. ಪ್ರತಿಪಕ್ಷ ಬಿಜೆಪಿ ಸದ್ಯ ಆಂತರಿಕ ಕಚ್ಚಾಟದಲ್ಲಿ ತೊಡಗಿದೆ. ಒಂದು ಕಡೆ ವಿಜಯಪುರ ಶಾಸಕ ಬಸನಗೌಡ ಪಾಟೀಲ ಯತ್ನಾಳ ಮತ್ತೊಂದು ಕಡೆ ವಿಜಯೇಂದ್ರ ಮಧ್ಯೆ ನಡೆಯುತ್ತಿರುವ ಶೀತಲ ಸಮರ ಜಂಗಿ ಕುಸ್ತಿಯಾಗಿದೆ. ಈ ಬಾರಿಯ ಚಳಿಗಾಲದ ಅಧಿವೇಶನದಲ್ಲಿ ಯಾವೆಲ್ಲಾ ವಿಷಯಗಳನ್ನು ಇಟ್ಟುಕೊಂಡು ಸರಕಾರವನ್ನು ಕಟ್ಟಿಹಾಕಬೇಕು ಎನ್ನುವ ಪ್ರತಿಪಕ್ಷಗಳು ಆಲೋಚನೆ ಮಾಡುವುದಕ್ಕು ಸಮಯ ಇಲ್ಲದಂತೆ ತಮ್ಮ ಆಂತರಿಕ ಭಿನ್ನಮತ ಶಮನಕ್ಕೆ ಕಸರತ್ತು ನಡೆಸಿದ್ದಾರೆ.

ಆಡಳಿತ ಪಕ್ಷ ಕಾಂಗ್ರೆಸ್ ಇದರ ಸದುಪಯೋಗ ಪಡೆದು, ಈ ಒಂದು ಅವಕಾಶ ಬಳಸಿಕೊಂಡು ಉತ್ತರ ಕರ್ನಾಟಕ ಅಭಿವೃದ್ಧಿ ಬಗ್ಗೆ ಗಂಭೀರ ಚಿಂತನೆ ನಡೆಸಬೇಕು. ಈ ಭಾಗದ ಜ್ವಲಂತ ಸಮಸ್ಯೆಗಳ ಪರಿಹಾರಕ್ಕೆ ಚಳಿಗಾಲದ ಅಧಿವೇಶನವನ್ನು ಸರಕಾರ ಬಳಸಿಕೊಳ್ಳಲಿ ಎನ್ನುವುದು ಉತ್ತರ ಕರ್ನಾಟಕ ಜನರ ಒತ್ತಾಸೆ.

ಕವನ

## ಸಂತ ಶ್ರೇಷ್ಠ ರಾಜಕಾರಣಿವರೇಣ್ಯರು



ಹುಲಕೋಟಿ ಹುಲಿಯೆಂದೇ
ಜನಜನಿತ ಪ್ರಖ್ಯಾತರು
ಶ್ರೀ.ಕೆಎಚ್. ಪಾಟೀಲವರ
ವರಸುಪುತ್ರರು /1/

ಪ್ರವಚನ ಹರಿಕಾರರು
ದಾನಧರ್ಮ ಶೂರರು
ಮಾನವೀಯತೆಯ ಸಾಕಾರರು
ಸದುವಿನಯವಂತ ಮಹಾನುಭಾವರು /2/

ಬಡವರ ಬಂಧುಬಾಂಧವರು
ಅನಾಥರ ಬಾಳಿಗೆ ಬೆಳಕಾಗಿಹರು
ಸರಳನಡೆ ನುಡಿವುಳ್ಳವರು
ಅಭಿನಂದನ ಗ್ರಂಥದ ನಾಯಕರು /3/

ಸಂಘಟನಾ ಚತುರರು
ಮಾಜಿ ಸಚಿವರು
ಸಹಕಾರಿ ಪಿತಾಮಹರ
ಕುಲದೀಪಕರು /4/

ಮಾನ್ಯ ಶ್ರೀ ಎಚ್.ಕೆ.ಪಾಟೀಲವರ
ಒಲವಿನ ಸಹೋದರರು
ಉನ್ನತ ಪ್ರಶಸ್ತಿ ಪುರಸ್ಕೃತರು
ಶ್ರೀ. ಡಿ.ಆರ್. ಪಾಟೀಲವರು /5/



ನಮ್ಮೂರ ಮಾಜಿ ಶಾಸಕರು
ಮನುಕುಲಕೆ ದಾರಿದೀಪದಂತಿಹರು
ಸಂತ ಶ್ರೇಷ್ಠ ರಾಜಕಾರಣಿವರೇಣ್ಯರು
ಶರಣ ಸುಸಂಸ್ಕೃತಿ ಪರಿಪಾಲಕರು /6/

– **ಪ್ರೊ.ಶಕುಂತಲಾ ಚನ್ನಪ್ಪ ಸಿಂಧೂರ, ಗದಗ.**

**ವಿಶ್ವ ವಿಕಲಚೇತನರ ದಿನಾಚರಣೆ ಕಾರ್ಯಕ್ರಮದಲ್ಲಿ ಜಿತೇಂದ್ರ ಮಜೇಥಿಯಾ**

# ಉತ್ತಮ ಕೆಲಸ ಮಾಡುವವರನ್ನು ಪ್ರೋತ್ಸಾಹಿಸಿ

■ **ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ**

ವಿಕಲಚೇತನರನ್ನು ಸಮಾಜದಲ್ಲಿ ಗುರುತಿಸುವ ಕೆಲಸಗಳಾಗಬೇಕು. ಒಳ್ಳೆಯ ಕೆಲಸ ಮಾಡುವವರಿಗೆ ಪ್ರೋತ್ಸಾಹ ನೀಡಬೇಕಾಗಿದೆ ಎಂದು ಮಜೇಥಿಯಾ ಫೌಂಡೇಶನ್ ಸಂಸ್ಥಾಪಕರಾದ ಜಿತೇಂದ್ರ ಮಜೇಥಿಯಾ ಹೇಳಿದರು.

ಮಂಗಳವಾರ ಇಂದಿರಾ ಗಾಜಿನ ಮನೆಯಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಯುವಜನ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಧಾರವಾಡ, ಅದಮ್ಯ ಚೇತನ ಫೌಂಡೇಶನ್, ಮಜೇಥಿಯಾ ಫೌಂಡೇಶನ್, ಹುಬ್ಬಳ್ಳಿ 'ಸಕ್ಷಮ' ಕರ್ನಾಟಕ ಉತ್ತರ ಪ್ರಾಂತ, ಆಶಾಕಿರಣ ಕಿಮ್ಸ್ ಹುಬ್ಬಳ್ಳಿ, ವಿಕಲಚೇತನರ ಶ್ರೇಯೋಭಿವೃದ್ಧಿಗಾಗಿ ಶ್ರಮಿಸುತ್ತಿರುವ ಜಿಲ್ಲೆಯ ಸ್ವಯಂ ಸೇವಾ ಶಿಕ್ಷಣ ಸಂಸ್ಥೆಗಳು ಮತ್ತು ವಿಕಲಚೇತನರ ಸಂಘ ಸಂಸ್ಥೆಗಳು, ವಿ.ಆರ್.ಡಬ್ಲ್ಯೂ, ಯು.ಆರ್.ಡಬ್ಲ್ಯೂ. ಎಮ್.ಆರ್.ಡಬ್ಲ್ಯೂ, ಧಾರವಾಡ ಇವುಗಳ ಸಂಯುಕ್ತಾಶ್ರಯದಲ್ಲಿ 'ಸಮಗ್ರ ಮತ್ತು ಸುಸ್ಥಿರ ಭವಿಷ್ಯಕ್ಕಾಗಿ ವಿಕಲಚೇತನ ವ್ಯಕ್ತಿಗಳಲ್ಲಿ ನಾಯಕತ್ವಕ್ಕೆ ಉತ್ತೇಜನ' ವಿಶ್ವ ಸಂಸ್ಥೆಯ ಘೋಷವಾಕ್ಯದಡಿಯಲ್ಲಿ ಆಯೋಜಿಸಿದ್ದ ವಿಶ್ವ ವಿಕಲಚೇತನರ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.



ನಮ್ಮ ಫೌಂಡೇಶನ್ ವತಿಯಿಂದ ವಿಶೇಷಚೇತನರಿಗೆ ಕೃತಕ ಅಂಗಾಂಗ ಜೋಡಣೆ ಸಲಕರಣೆಗಳನ್ನು ನೀಡಲಾಗುತ್ತಿದೆ. ಮುಂದಿನ ದಿನಗಳಲ್ಲಿ ಹಲವಾರು ಯೋಜನೆಗಳನ್ನು ಹಾಕಿಕೊಳ್ಳಲಾಗಿದೆ. ಕೆಲಸ ಕಾರ್ಯಗಳನ್ನು ಮಾಡುವವರಿಗೆ ಪ್ರೋತ್ಸಾಹ ಒದಗಿಸಬೇಕಾಗಿದೆ ಎಂದರು.

ಐ.ಕೆ. ಲಕ್ಕುಂಡಿ ಮಾತನಾಡಿ, ಅಂಗವಿಕಲರ ಭವನ ನಿರ್ಮಾಣ ಮಾಡಲಾಗುತ್ತಿದೆ. ಜಿಲ್ಲೆಯಲ್ಲಿ ಕೌಶಲ್ಯ ಕೇಂದ್ರ ತೆರೆಯಬೇಕು. ಸರ್ಕಾರದಿಂದ ವಿಶೇಷಚೇತನರಿಗೆ ಹೆಚ್ಚಿನ ಅನುದಾನ ಬಿಡುಗಡೆಗೊಳಿಸಬೇಕಿದೆ. ಅಲ್ಲದೇ ತರಬೇತಿ ಕೇಂದ್ರಗಳನ್ನು ಸ್ಥಾಪಿಸಿ, ತರಬೇತಿ ನೀಡುವ ಕಾರ್ಯಗಳಾಗಬೇಕು. ವಿಶೇಷಚೇತನರಿಗೆ ಹೆಚ್ಚಿನ ಸಾಲ ಸೌಲಭ್ಯ ದೊರೆಯಬೇಕು ಎಂದು ಒತ್ತಾಯಿಸಿದರು.

ವಕೀಲರಾದ ಎಸ್.ಎಸ್. ಪಾಟೀಲ ಮಾತನಾಡಿ, ವಿಕಲಚೇತನರಿಗೆ ಸರ್ಕಾರದ ವತಿಯಿಂದ ಹಲವಾರು ಯೋಜನೆಗಳಿವೆ. ಸರ್ಕಾರವು ವಕೀಲರನ್ನು ನೇಮಿಸಿ ಉಚಿತವಾಗಿ ಪ್ರಕರಣಗಳನ್ನು ಇತ್ಯರ್ಥಪಡಿಸಲಾಗುತ್ತದೆ. ಹೀಗಾಗಿ ಯಾರೂ ಕೂಡ ಅವಕಾಶವನ್ನು ಕಳೆದುಕೊಳ್ಳಬಾರದು ಎಂದು ಹೇಳಿದರು.

ಸೆಲ್ಕೋ ಕಂಪನಿಯ ಮ್ಯಾನೇಜರ್ ರಾಜೇಂದ್ರ ಮಾತನಾಡಿ, ವಿಕಲಚೇತನರಿಗೆ ಸೋಲಾರ್ ಉಪಕರಣಗಳಿಗಾಗಿ ಶೇ.50ರಷ್ಟು ರಿಯಾಯಿತಿ ನೀಡಲಾಗುತ್ತದೆ. ಸರ್ಕಾರದ ಹಲವಾರು ಯೋಜನೆಗಳಿವೆ. ಅವುಗಳ ಸದುಪಯೋಗ ಪಡೆದುಕೊಳ್ಳಬೇಕು. ಗ್ರಾಹಕರಿಗೆ ಯಾವ ರೀತಿಯಲ್ಲಿ ಯಂತ್ರೋಪಕರಣಗಳು ಬೇಕೋ ಹಾಗೆಯೇ ಯಂತ್ರೋಪಕರಣಗಳನ್ನು ಸಿದ್ಧಪಡಿಸಿ ನೀಡಲಾಗುವುದು ಎಂದರು.

ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳಾದ ಜಗದೀಶ ಕೆ.ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು.

### ಗಮನ ಸೆಳೆದ ಸಾಮರಸ್ಯ ಸಾರುವ ನೃತ್ಯಗಳು

ವಿಶೇಷಚೇತನ ವಿದ್ಯಾರ್ಥಿಗಳು ತಮ್ಮ ನೃತ್ಯಗಳ ಮೂಲಕ ನೋಡುಗರ ಗಮನ ಸೆಳೆದರು. ಆಂಜನೇಯನ ಮಹಿಮೆ, ವಿಘ್ನ ವಿನಾಯಕನ ಮಹಿಮೆ, ಕ್ರೀಡಾ ಮನೋಭಾವ, ಚನ್ನಪ್ಪ ಚನ್ನಗೌಡ ಸೇರಿದಂತೆ ವಿವಿಧ ಸಾಮರಸ್ಯ ಸಾರುವ ನೃತ್ಯಗಳು ನೋಡುಗರಿಂದ ಮೆಚ್ಚುಗೆ ಪಡೆದುಕೊಂಡವು. ವಿಶ್ವ ವಿಕಲಚೇತನ ದಿನಾಚರಣೆ ಅಂಗವಾಗಿ ಆಯೋಜಿಸಿದ್ದ ಕ್ರೀಡಾಕೂಟದಲ್ಲಿ ವಿಜೇತರಾದವರಿಗೆ ಬಹುಮಾನಗಳನ್ನು ವಿತರಿಸಲಾಯಿತು. ಹಾಸ್ಯ ಕಲಾವಿದ ಮಲ್ಲಪ್ಪ ಹೊಂಗಲ್ ಮತ್ತು ಮಜಾ ಭಾರತ ಖ್ಯಾತಿಯ ಬಸವರಾಜ ಗುಡ್ಡಪ್ಪನವರ ಅವರ ಹಾಸ್ಯ ಕಾರ್ಯಕ್ರಮ ಮನರಂಜನೆ ನೀಡಿತು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ಡಾ. ಹೆಚ್.ಹೆಚ್. ಕುಕನೂರ ಅಧ್ಯಕ್ಷತೆ ವಹಿಸಿದ್ದರು.

ಕಲಾವತಿ ಹೊಸೂರ, ಲಕ್ಷ್ಮೀ ಮೇಟಿ, ಬಸಪ್ಪ ಹೆಬಸೂರು, ದೇವಪ್ಪ ಮೊರೆ, ಮೊಹಮ್ಮದ್ ಹುಲ್ಬನಿ, ಯಲ್ಲಪ್ಪ ಸುಳ್ಳದ, ಆತ್ಮಾನಂದ ಅಕ್ಕಿ, ಗೀತಾ ನಾಯ್ಕ, ವಿದ್ಯಾ ಬಾಕಳೆ, ಸುರೇಖಾ ಪಾಟೀಲ, ಇನ್‌ಸಲೀಮ ಸೊಲ್ಲಾಪುರ, ನೀಲಮ್ಮ ಧಾರವಾಡ, ಕಲ್ಪನ ತಿಪ್ಪಕ್ಕನವರ, ಸೀಮಾ ಗೋಂದಕರ, ನಾಗಪ್ಪ ಹಿರೇಮೊರಬ ಸೇರಿದಂತೆ ಇತರರನ್ನು ಸನ್ಮಾನಿಸಿ ಗೌರವಿಸಲಾಯಿತು.











**ರೋಟರಿ ಸಂಸ್ಥೆ ಗದಗ–ಬೆಟಗೇರಿಯ 80ನೇ ಸನದು ಪ್ರಧಾನ ದಿನಾಚಾರಣೆ**

# ಜಿಲ್ಲಾ ಗವರ್ನರ್ ಪ್ರತಿನಿಧಿ ರೊ. ಅಶೋಕ ನಾಯ್ಕ

ರೊ.ಅಶೋಕ ನಾಯ್ಕರವರು ಬೆಳಗಾವ್ ನಗರದಲ್ಲಿ ಜನಿಸಿ ತಮ್ಮ ವಿದ್ಯಾಭ್ಯಾಸವನ್ನು ಬೆಳಗಾವಿಯಲ್ಲಿಯೇ ಪೂರೈಸಿದ್ದಾರೆ. ಬಿ.ಎಸ್‌ಸಿ ಪದವೀಧರರಾದ ಇವರು ಬೆಳಗಾವಿಯ ಪ್ರಮುಖ ಲ್ಯಾಂಡ್ ಡೆವೆಲಪ್‌ರ್ ಹಾಗೂ ಬಿಲ್ಡರ್‌ರಾಗಿದ್ದು ಅನೇಕ ಬೃಹತ್ ಕಟ್ಟಡಗಳನ್ನು ನಿರ್ಮಿಸಿದ್ದಾರೆ. ಇವರು 1998ರಲ್ಲಿ ರೋಟರಿ ಸಂಸ್ಥೆ ಬೆಳಗಾವಿ ಸೌತ್ ಸಂಸ್ಥೆಗೆ ಸಕ್ರೀಯ ಸದಸ್ಯರಾಗಿ ಸೇರ್ಪಡೆಗೊಂಡರು. ಇವರು ತಮ್ಮ ಸಂಸ್ಥೆಯ ರೋಟ–ರಿಯ ಎಲ್ಲ ಪ್ರಮುಖ ವಿಭಾಗಗಳ ನಿರ್ದೇಶಕರಾಗಿ ಹಾಗೂ ರೋಟರಿಯ ಯೋಜನೆಗಳಿಗೆ ಹಣ ಸಂಗ್ರಹಿಸುವಲ್ಲಿ ಪ್ರಮುಖ ಪಾತ್ರ ವಹಿಸಿದ್ದಾರೆ.

ಶ್ರೀಯುತರು 2007–08ರ ರೋಟರಿ ಸಾಲಿಗೆ ಸಂಸ್ಥೆಯ ಕಾರ್ಯದರ್ಶಿಗಳಾಗಿ ಹಾಗೂ 2021–22ರಲ್ಲಿ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದಾರೆ. ಇವರು ತಮ್ಮ ಅಧ್ಯಕ್ಷೀಯ ಸೇವಾ ಅವಧಿಯಲ್ಲಿ ರೋಟರಿ ಅಂತಾರಾಷ್ಟ್ರೀಯ ಪ್ರತಿಷ್ಠಾನಕ್ಕೆ ವೈಯಕ್ತಿಕವಾಗಿ 85,000 ಯು.ಎಸ್ ಡಾಲರ್ ದೇಣಿಗೆಯನ್ನ ನೀಡಿ ರೋಟರಿಯ ಮೇಜರ್ ಡೋನರ್ ಪ್ರಶಸ್ತಿಯನ್ನು ಪಡೆದರು. ಅಲ್ಲದೆ ಇದೇ ಅವಧಿಯಲ್ಲಿ ರೋಟರಿಯ ಗ್ಲೋಬಲ್ ಗ್ರ್ಯಾಂಟನಡಿ 1,87,000 ಯು.ಎಸ್ ಡಾಲರ್ ಮೌಲ್ಯದ ಯೋಜನೆಯನ್ನು ಅನುಷ್ಠಾನಗೊಳಿಸಿದ್ದು ಹೆಮ್ಮೆಯ ವಿಷಯವಾಗಿದೆ. ಇವರ ಅಧ್ಯಕ್ಷಾವಧಿಯ ಸೇವೆಯನ್ನು ಪರಿಗಣಿಸಿ ಇವರಿಗೆ ರೋಟರಿ ಜಿಲ್ಲೆಯು ಉತ್ತಮ ಕ್ಲಬ್, ಉತ್ತಮ ಅಧ್ಯಕ್ಷ ಅಲ್ಲದೆ ಇತರೆ 14 ಜಿಲ್ಲಾ ಪ್ರಶಸ್ತಿಗಳನ್ನು ನೀಡಿ ಗೌರವಿಸಿದೆ.

ರೊ. ಅಶೋಕ ನಾಯ್ಕರವರು ಕಳೆದ 25 ವರ್ಷಗಳಿಂದ ರೋಟರಿ



ಜಿಲ್ಲೆ 3170ದಲ್ಲಿ ಅನೇಕ ಹುದ್ದೆಗಳನ್ನು ನಿರ್ವಹಿಸಿದ್ದಾರೆ. ಅವುಗಳಲ್ಲಿ ಪ್ರಮುಖವಾಗಿ 2012 ಹಾಗೂ 2018 ರ ಜಿಲ್ಲಾ ಸಮ್ಮೇಳನದ ಕ್ಯಾಟರಿಂಗ ಕಮಿಟಿಯ ಚೇರಮನ್ನರಾಗಿ, 2011–12ರಲ್ಲಿ ಜಿಲ್ಲಾ ಕಾರ್ಯದರ್ಶಿಯಾಗಿ, 2017–18ರಲ್ಲಿ ಗೌರ್‍ನರ ಏಡ್ ಆಗಿ, 2022–23 ಜಿಲ್ಲಾ ಸಮ್ಮೆಳನದ ಚೇರಮನ್ನರಾಗಿ ಕಾರ್ಯನಿರ್ವಹಿಸಿದ್ದಾರೆ. ಅಲ್ಲದೆ 2023–24ನೇ ಸಾಲಿನಲ್ಲಿ ಚೀಫ್ ಅಸಿಸ್ಟಂಟ್ ಗವರ್ನರರಾಗಿ ಉತ್ತಮ ಅಸಿಸ್ಟಂಟ್ ಗವರ್ನರ್ ಹಾಗೂ ರೋಟರಿ ಪ್ರತಿಷ್ಠಾನದ ಪ್ರಶಸ್ತಿಯನ್ನು ಪಡೆದಿದ್ದಾರೆ. ಪ್ರಸಕ್ತ ಸಾಲಿನಲ್ಲಿ ಶ್ರೀಯುತರು ಜಿಲ್ಲಾ ಕಾರ್ಯದರ್ಶಿ ಇವೆಂಟ್ಸ ಹಾಗೂ ಜಿಲ್ಲಾ ಕಾರ್ಯದರ್ಶಿ ಎನ್ಯುವಲ್ ಗಿವಿಂಗ್ ಆಗಿ ಕಾರ್ಯನಿರ್ವಹಿಸುತ್ತಿದ್ದಾರೆ.

ಇವರು ತಮ್ಮ ಸಾರ್ವಜನಿಕ ಸೇವೆಗೆ ಅನೇಕ ಪ್ರಶಸ್ತಿಗಳನ್ನು ಪಡೆದಿದ್ದು ಅವುಗಳಲ್ಲಿ ಪ್ರಮುಖವಾಗಿ ಮಹಾರಾಷ್ಟ್ರದ ಪ್ರಮುಖ ಪತ್ರಿಕೆಯಾದ ಸಕಾಲ ಇದರ ಮಹಾರಾಷ್ಟ್ರಾ ಐಕಾನ್ ಪ್ರಶಸ್ತಿ ಹಾಗೂ ಭಾರತ ಸರ್ಕಾರದ ಮಾನವ ಹಕ್ಕು ಭಾರತೀಯ ಐಕಾನ್ ಪ್ರಶಸ್ತಿ ಮುಂತಾದವು ಸೇರಿವೆ. ಇವರು ಕನಾಟಕ ರಾಜ್ಯ ಮಾನವ ಹಕ್ಕು ಸಂಸ್ಥೆಯ ಚೇರಮನ್ನರಾಗಿ, ನೇಸರ್ಗಿಯ ಸರ್ಕಾರಿ ಐ.ಟಿ.ಐ ಕಾಲೇಜಿನ ನಿದೇಶಕರಾಗಿ, ಕರ್ನಾಟಕ ರಾಜ್ಯ ಬಾಡಿ ಬಿಲ್ಡಿಂಗ ಅಸೋಸಿಯೇಶನ್ ಸದಸ್ಯರಾಗಿ, ರೆಡ್ ಕ್ರಾಸ್ ಸೊಸಾಯಿಟಿಯ ಸದಸ್ಯರಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಅಲ್ಲದೆ ಇವರು ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಿದ್ದು ಚಿತ್ರ ನಟ ಹಾಗೂ ನಟಿಯರನ್ನು ಆಹ್ವಾನಿಸಿದ್ದಾರೆ. ರೋಟರಿ ಸಂಸ್ಥೆ ಗದಗ–ಬೆಟಗೇರಿಯ 80ನೇ ಸನದು ಪ್ರಧಾನ ದಿನಾಚಾರಣೆಗೆ ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದು, ಸಂಸ್ಥೆಯು ಶ್ರೀಯುತರನ್ನು ಹಾರ್ದಿಕವಾಗಿ ಸ್ವಾಗತಿಸುತ್ತದೆ.

**–ರೋ.ಬಾಲಕೃಷ್ಣ ಕಾಮತ್.**
**ಕಾರ್ಯದರ್ಶಿಗಳು,**
**ರೋಟರಿ ವೆಲ್‌ಫೇರ್ ಸೊಸೈಟಿ.**

# ಆಟಗಳು ಮಕ್ಕಳಲ್ಲಿ ಸ್ಫೂರ್ತಿ ತುಂಬುತ್ತವೆ

■ **ವಿಜಯಸಾಕ್ಷಿ ಸುದ್ದಿ, ಗದಗ**

ವಿದ್ಯಾರ್ಥಿಗಳು ಪಾಠದೊಂದಿಗೆ ಆಟಗಳಲ್ಲಿಯೂ ಪಾಲ್ಗೊಂಡು ಸದೃಢತೆ ಹೊಂದಬೇಕು. ಆಟಗಳು ಮಕ್ಕಳಲ್ಲಿ ಸ್ಪರ್ಧಾತ್ಮಕತೆ ಹಾಗೂ ಸ್ಫೂರ್ತಿ ತುಂಬುತ್ತವೆ ಎಂದು ಇನ್ನರ್‌ವ್ಹೀಲ್ ಡಿಸ್ಟ್ರಿಕ್ಟ್ ಚೇರಮನ್ ಜ್ಯೋತಿ ಕಿರಣ್ ದಾಸ್ ಹೇಳಿದರು.

ಅವರು ಗದಗ–ಬೇಟಗೇರಿ ಇನ್ನರ್‌ವ್ಹೀಲ್‌ನ ದತ್ತು ಶಾಲೆಯಾದ ಗದುಗಿನ ಸರ್ಕಾರಿ ಶಾಲೆ ನಂ. 16ರಲ್ಲಿ ಕ್ಲಬ್‌ನಿಂದ ಕೊಡಮಾಡಿದ ಶೈಕ್ಷಣಿಕ ವಸ್ತುಗಳನ್ನು ಮಕ್ಕಳಿಗೆ ವಿತರಿಸಿ ಮಾತನಾಡಿದರು.

ಗ ದ ಗ – ಬೇ ಟ ಗೇ ರಿ ಇನ್ನರ್‌ವ್ಹೀಲ್ ಕ್ಲಬ್ ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗಾಗಿ ಸರ್ಕಾರಿ ಶಾಲೆಗಳನ್ನು ದತ್ತು ಪಡೆದು ಮಕ್ಕಳ ಕಲಿಕೆಗೆ ಪೂರಕವಾಗುವ ಸಾಮಗ್ರಿಗಳನ್ನು ಒದಗಿಸಿ ನಂತರ




ಅದನ್ನು ಹ್ಯಾಪಿ ಸ್ಕೂಲ್ ಎಂದು ಘೋಷಿಸಲಾಗಿದೆ ಎಂದರು.

ಪಿ.ಡಿ.ಸಿ ಪ್ರೇಮಾ ಗುಳಗೌಡ್ರ ಮಾತನಾಡಿ, ಕ್ಲಬ್‌ನಿಂದ ಶಾಲೆಗೆ ಅಗತ್ಯವಾದ ಕ್ರೀಡಾ ಸಾಮಗ್ರಿಗಳು, ಲೈಬ್ರರಿ ಪುಸ್ತಕಗಳು, ಕುರ್ಚಿ–ಟೇಬಲ್‌ಗಳು, ಯುನಿಫಾರಂ ವಿತರಿಸಲಾಗಿದ್ದು, ಕ್ಲಬ್‌ನ ಸೇವೆ ನಿರಂತರ ಇರುತ್ತದೆ ಎಂದರು.

ಕ್ಲಬ್ ಅಧ್ಯಕ್ಷೆ ನಾಗರತ್ನಾ ಮಾರನಬಸರಿ ಸ್ವಾಗತಿಸಿದರು. ಕಾರ್ಯದರ್ಶಿ ವೀಣಾ ತಿರ್ಲಾಪೂರ ನಿರೂಪಿಸಿದರು. ಸಿ.ಎಲ್.ಸಿ.ಸಿ ಸುಮಾ ಪಾಟೀಲ ಪರಿಚಯಿಸಿದರು. ಐ.ಎಸ್.ಓ ಪುಷ್ಪಾ ಭಂಡಾರಿ ವಂದಿಸಿದರು.

ಕಾರ್ಯಕ್ರಮದಲ್ಲಿ ಮೀನಾಕ್ಷಿ ಕೊರವನವರ, ಸುವರ್ಣಾ ವಸ್ತ್ರದ, ಪ್ರತಿಭಾ ಭದ್ರಶೆಟ್ಟಿ, ಶಾಲೆಯ ಪ್ರಭಾರಿ ಮುಖ್ಯೋಪಾಧ್ಯಾಯರಾದ ಎಂ.ಆರ್. ನೀಲಣ್ಣವರ, ಶಿಕ್ಷಕಿಯರಾದ ಸುರೇಖಾ ಮರಕುಂಬಿ, ಎ.ಎನ್. ನಮಾಜಿ ಮುಂತಾದವರಿದ್ದರು.

## ಬಾಟಲ್ ನೀರು ಅಧಿಕ ಅಪಾಯಕಾರಿ ಆಹಾರ' FSSAI ಘೋಷಣೆ

■ **ವಿಜಯಸಾಕ್ಷಿ ಸುದ್ದಿ, ನವದೆಹಲಿ**

ಭಾರತೀಯ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪ್ರಾಧಿಕಾರ (FSSAI) ಪ್ಯಾಕೇಜ್ ಮಾಡಲಾದ ಕುಡಿಯುವ ಮಿನರಲ್ ವಾಟರ್ ಮತ್ತು ಖನಿಜಯುಕ್ತ ನೀರನ್ನು ಹೆಚ್ಚಿನ ಅಪಾಯದ ಆಹಾರ ವರ್ಗ ಎಂದು ಪರಿಗಣಿಸಿದ್ದು, ವಾರ್ಷಿಕ ತಪಾಸಣೆಗಳನ್ನು ಕಡ್ಡಾಯಗೊಳಿಸಿದೆ ಎಂದು ವರದಿಯಾಗಿದೆ. ಈ ಬಗ್ಗೆ ನವೆಂಬರ್ 29 ರಂದು ಹೊರಡಿಸಿದ ಆದೇಶದಲ್ಲಿ, ಬಾಟಲ್ ಕುಡಿಯುವ ಮತ್ತು ಖನಿಜಯುಕ್ತ ನೀರನ್ನು ಹೆಚ್ಚಿನ ಅಪಾಯಕಾರಿ ಆಹಾರ ವಿಭಾಗದಲ್ಲಿ ಸೇರಿಸಲು ತಿದ್ದುಪಡಿ ಮಾಡುತ್ತಿದೆ ಎಂದು ಹೇಳಿತ್ತು. ಬಾಟಲ್ ನೀರು

ಪ್ಯಾಕ್ ಮಾಡಲಾದ ಕುಡಿಯುವ ಮತ್ತು ಖನಿಜಯುಕ್ತ ನೀರಿನ ಉದ್ಯಮಕ್ಕಾಗಿ ಬ್ಯೂರೋ ಆಫ್ ಇಂಡಿಯನ್ ಸ್ಟ್ಯಾಂಡರ್ಡ್‌ನಿಂದ ಪ್ರಮಾಣೀಕರಣ ಪಡೆಯಬೇಕಾದ ಕಡ್ಡಾಯ ಷರತ್ತನ್ನು ತೆಗೆದು ಹಾಕಲು ಸರ್ಕಾರ ತೀರ್ಮಾನ ಮಾಡಿತ್ತು. ಇದರಿಂದ ಕೆಲವು ಉತ್ಪನ್ನಗಳಿಗೆ ಕಡ್ಡಾಯ ಬ್ಯೂರೋ ಆಫ್ ಇಂಡಿಯನ್ ಸ್ಟ್ಯಾಂಡರ್ಡ್ಸ್ (ಬಿಐಎಸ್) ಪ್ರಮಾಣೀಕರಣ ಅಗತ್ಯವಾಗಿಲ್ಲದ ಕಾರಣ, 'ಪ್ಯಾಕೇಜ್ಡ್ ಡ್ರಿಂಕಿಂಗ್ ವಾಟರ್ ಮತ್ತು ಮಿನರಲ್ ವಾಟರ್' ಅನ್ನು 'ಅಧಿಕ ಅಪಾಯದ ಆಹಾರ ವರ್ಗಗಳ' ಅಡಿಯಲ್ಲಿ ಪರಿಗಣಿಸಲಾಗುತ್ತದೆ' ಎಂದು FSSAI ಆದೇಶದಲ್ಲಿ ತಿಳಿಸಿದೆ.

ಪ್ಯಾಕೇಜ್ ಮಾಡಲಾದ ಕುಡಿಯುವ ನೀರನ್ನು ಹೆಚ್ಚಿನ ಅಪಾಯದ ಆಹಾರ ವರ್ಗ ಎಂದು ಘೋಷಿಸಿದ FSSAI ಗ್ರಾಹಕರ ರಕ್ಷಣೆ ಮತ್ತು ಪ್ಯಾಕೇಜ್ ಮಾಡಿದ ನೀರಿನ ಉದ್ಯಮದಲ್ಲಿ ಗುಣಮಟ್ಟ ಕಾಪಾಡಲು ಈ ಆದೇಶ ನೀಡಲಾಗಿದೆ ಎನ್ನಲಾಗಿದೆ. ಬಾಟಲ್ ನೀರು

ಹೆಚ್ಚಿನ ಅಪಾಯದ ಆಹಾರ ವರ್ಗದ ಅಡಿಯಲ್ಲಿ ಬರುವ ಆಹಾರ ಉತ್ಪನ್ನಗಳನ್ನು ಕಡ್ಡಾಯವಾಗಿ ತಪಾಸಣೆಗೆ ಒಳಪಡಿಸಲಾಗುತ್ತದೆ. ಪ್ಯಾಕೇಜ್ಡ್ ಕುಡಿಯುವ ನೀರು ಮತ್ತು ಖನಿಜಯುಕ್ತ ನೀರಿನ ತಯಾರಕರು ಪ್ರತಿ ವರ್ಷಕ್ಕೊಮ್ಮೆ ಅಪಾಯ ಆಧಾರಿತ ತಪಾಸಣೆಗೆ ಒಳಗಾಗುತ್ತಾರೆ. ಪರವಾನಗಿ ಅಥವಾ ನೋಂದಣಿಯನ್ನು ನೀಡುವ ಮೊದಲು ಕೂಡ ತಪಾಸಣೆ ನಡೆಸಲಾಗುತ್ತದೆ"

ಅಕ್ಟೋಬರ್‌ನಲ್ಲಿ ಪ್ಯಾಕೇಜ್ಡ್ ಕುಡಿಯುವ ನೀರು ಸೇರಿದಂತೆ ಕೆಲವು ಉತ್ಪನ್ನಗಳಿಗೆ ಕಡ್ಡಾಯವಾದ ಬ್ಯೂರೋ ಆಫ್ ಇಂಡಿಯನ್ ಸ್ಟ್ಯಾಂಡರ್ಡ್ಸ್ (BIS) ಪ್ರಮಾಣೀಕರಣವನ್ನು ತೆಗೆದುಹಾಕಲಾಗಿತ್ತು. 2023 ರಲ್ಲಿ ಸುಮಾರು $3,790 ಮಿಲಿಯನ್ ಮೌಲ್ಯದ ಮಾರುಕಟ್ಟೆಯಿದ್ದ ಭಾರತೀಯ ಬಾಟಲ್ ನೀರಿನ ವ್ಯವಹಾರವು 2030 ರ ವೇಳೆಗೆ $8,922 ಮಿಲಿಯನ್ ತಲುಪುತ್ತದೆ ಎಂದು ಟ್ರೇಡ್ ಪ್ರಮೋಷನ್ ಕೌನ್ಸಿಲ್ ಆಫ್ ಇಂಡಿಯಾ ಅಂದಾಜಿಸಿದೆ.

# ಪ್ರಚೋದನಕಾರಿ ಸುದ್ದಿ | ಭಾರತೀಯ ಟಿವಿ ಚಾನೆಲ್‌ಗಳನ್ನು ನಿಷೇಧಿಸುವಂತೆ ಬಾಂಗ್ಲಾದೇಶ ಹೈಕೋರ್ಟ್‌ಗೆ ಅರ್ಜಿ

■ **ವಿಜಯಸಾಕ್ಷಿ ಸುದ್ದಿ, ಬಾಂಗ್ಲಾದೇಶ**

ಎಲ್ಲಾ ಭಾರತೀಯ ಟಿವಿ ಚಾನೆಲ್‌ಗಳಲ್ಲಿ ಪ್ರಸಾರವಾದ ಪ್ರಚೋದನಕಾರಿ ಸುದ್ದಿಗಳನ್ನು ಉಲ್ಲೇಖಿಸಿ ಅವುಗಳ ಪ್ರಸಾರವನ್ನು ನಿಷೇಧಿಸುವಂತೆ ಕೋರಿ ಬಾಂಗ್ಲಾದೇಶ ಹೈಕೋರ್ಟ್‌ನಲ್ಲಿ ರಿಟ್ ಅರ್ಜಿಯನ್ನು ಸಲ್ಲಿಸಲಾಗಿದೆ ಎಂದು ಮಾಧ್ಯಮಗಳು ವರದಿ ಮಾಡಿವೆ. ವಕೀಲ ಎಖ್ಲಾಸ್ ಉದ್ದೀನ್ ಭುಯಾನ್ ಅವರು ಈ ಅರ್ಜಿ ಸಲ್ಲಿಸಿದ್ದು, ಈ ಬಗ್ಗೆ ಅವರು ಸೋಮವಾರ ದೃಢಪಡಿಸಿದ್ದಾರೆ ಎಂದು ಢಾಕಾ ಟ್ರಿಬ್ಯೂನ್ ವರದಿ ಮಾಡಿದೆ.

ನ್ಯಾಯಮೂರ್ತಿ ಫಾತಿಮಾ ನಜೀಬ್ ಮತ್ತು ನ್ಯಾಯಮೂರ್ತಿ ಸಿಕ್ದರ್ ಮಹಮುದೂರ್ ರಾಜಿ ಅವರನ್ನೊಳಗೊಂಡ ಹೈಕೋರ್ಟ್ ಪೀಠದಲ್ಲಿ ಅರ್ಜಿಯ ವಿಚಾರಣೆ ನಡೆಯಬಹುದು ಎಂದು ಭೂಯಾನ್ ಹೇಳಿದ್ದಾರೆ. ಬಾಂಗ್ಲಾದೇಶದಲ್ಲಿ ಎಲ್ಲಾ ಭಾರತೀಯ ಟಿವಿ ಚಾನೆಲ್‌ಗಳ ಪ್ರಸಾರವನ್ನು ನಿಷೇಧಿಸುವಂತೆ ಕೋರಿ ಹೈಕೋರ್ಟ್‌ನಲ್ಲಿ ರಿಟ್ ಅರ್ಜಿ ಸಲ್ಲಿಸಲಾಗಿದೆ ಎಂದು ವರದಿ ತಿಳಿಸಿದೆ.

ಎಲ್ಲಾ ಭಾರತೀಯ ಟಿವಿ ಚಾನೆಲ್‌ಗಳ ಪ್ರಸಾರವನ್ನು ನಿಷೇಧಿಸಲು ಕೇಬಲ್ ಟೆಲಿವಿಷನ್ ನೆಟ್‌ವರ್ಕ್ ಆಪರೇಷನ್ ಆಕ್ಟ್ 2006 ರ ಸೆಕ್ಷನ್ 29 ರ ಅಡಿಯಲ್ಲಿ ನಿರ್ದೇಶನವನ್ನು ನೀಡಬೇಕು ಎಂದು ರಿಟ್ ಅರ್ಜಿ ಬಯಸಿದೆ.

"ಬಾಂಗ್ಲಾದೇಶದಲ್ಲಿ ಭಾರತೀಯ ಟಿವಿ ಚಾನೆಲ್‌ಗಳ ಮೇಲೆ ನಿಷೇಧ ಹೇರುವ ನಿಯಮವನ್ನು ಏಕೆ ಹೊರಡಿಸಬಾರದು" ಎಂದು ಅದು ಕೇಳಿದೆ. ಸ್ಟಾರ್ ಜಲ್ಸಾ, ಸ್ಟಾರ್ ಪ್ಲಸ್, ಝೀ ಬಾಂಗ್ಲಾ, ರಿಪಬ್ಲಿಕ್ ಬಾಂಗ್ಲಾ ಮತ್ತು ಇತರ ಎಲ್ಲಾ ಭಾರತೀಯ ಟಿವಿ ಚಾನೆಲ್‌ಗಳಂತಹ ಚಾನೆಲ್‌ಗಳನ್ನು ನಿಷೇಧಿಸಲು ರಿಟ್ ಅರ್ಜಿ ಕರೆ ನೀಡುತ್ತದೆ ಎಂದು ವರದಿ ಹೇಳಿದೆ.

ಭಾರತೀಯ ಚಾನೆಲ್‌ಗಳಲ್ಲಿ ಪ್ರಚೋದನಕಾರಿ ಸುದ್ದಿಗಳನ್ನು ಪ್ರಸಾರ ಮಾಡಲಾಗುತ್ತಿದೆ ಮತ್ತು ಬಾಂಗ್ಲಾದೇಶದ ಸಂಸ್ಕೃತಿಯನ್ನು ವಿರೋಧಿಸುವ ವಿಷಯದ ಅನಿಯಂತ್ರಿತ ಪ್ರಸಾರಗಳು ಯುವಕರ ನಾಶಕ್ಕೆ ಕಾರಣವಾಗುತ್ತಿವೆ ಎಂದು ಅರ್ಜಿಯಲ್ಲಿ ಆರೋಪಿಸಲಾಗಿದೆ ಎಂದು ಮಾಧ್ಯಮ ವರದಿಗಳು ಹೇಳಿವೆ. ಭಾರತದ ಈ ಚಾನಲ್‌ಗಳು ಯಾವುದೇ ನಿಯಮಗಳಿಗೆ ಬದ್ಧವಾಗಿಲ್ಲ ಎಂದು ಅರ್ಜಿಯು ಹೇಳಿದೆ.

# ಜ 7ರಿಂದ ಮೂರು ದಿನಗಳ ರಾಷ್ಟ್ರೀಯ ಸಮ್ಮೇಳನ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯು " ಎಕ್ಸಪ್ಲೋರಿಂಗ್ ನೇಚರ್ಸ್ ಫಾರ್ಮಸಿ ಪೊಟೆನ್ಸಿಯಲ್ ಆಫ್ ಮೆಡಿಟೇಷನಲ್ ಮತ್ತು ಏರೋಮೆಟಿಕ್ ಪ್ಲಾಂಟ್ಸ್ ಮತ್ತು ದೇರ್ ಕನ್ಸರ್ವೇಶನ್ " ವಿಷಯದ ಮೇಲೆ 7-1-2025 ರಿಂದ 9-1-2025 ರವರೆಗೆ ಮೂರು ದಿನಗಳ ರಾಷ್ಟ್ರೀಯ ಸಮ್ಮೇಳನವನ್ನು ಅಕಾಡೆಮಿಯ ಕಚೇರಿಯಲ್ಲಿ ಆಯೋಜಿಸಲಾಗುತ್ತದೆ.

ಈ ಸಮ್ಮೇಳನದಲ್ಲಿ ವಿವಿಧ ಪ್ರತಿಷ್ಠಿತ ಸಂಸ್ಥೆಗಳ ಹೆಸರಾಂತ ವಿಜ್ಞಾನಿಗಳು ತಾಂತ್ರಿಕ ಉಪನ್ಯಾಸಗಳನ್ನು ನೀಡಲಿದ್ದಾರೆ. ಈ ಸಮ್ಮೇಳನದಲ್ಲಿ ಯುವ ವಿಜ್ಞಾನಿಗಳು ಮತ್ತು ಸಂಶೋಧನಾ ವಿದ್ಯಾರ್ಥಿಗಳು ರಿಸರ್ಚ ಪೇಪರ್ ಪ್ರಸೆಂಟೇಶನ್ ಮಂಡಿಸಲು ಅವಕಾಶ ಕಲ್ಪಿಸಲಾಗಿದ್ದು, ಆಯ್ಕೆಯಾದ ರಿಸರ್ಚ ಪೇಪರ್‌ಗಳಿಗೆ ನಗದು ಬಹುಮಾನವನ್ನು ನೀಡಲಾಗುವುದು. ಈ ಸಮ್ಮೇಳನದಲ್ಲಿ ಸ್ನಾತಕೋತ್ತರ ವಿಜ್ಞಾನ ವಿದ್ಯಾರ್ಥಿಗಳು, ಸಂಶೋಧನಾ ವಿದ್ಯಾರ್ಥಿಗಳು, ಪ್ರಾಧ್ಯಾಪಕರು, ಯುವ ವಿಜ್ಞಾನಿಗಳು, ಶೈಕ್ಷಣಿಕ ತಜ್ಞರು, ಯುವ ಉದ್ಯಮದಾರರು ಭಾಗವಹಿಸಬಹುದಾಗಿದ್ದು, ಆಸಕ್ತ ಪ್ರತಿನಿಧಿಗಳು ಡಿಸೆಂಬರ್ 31 ರೊಳಗಾಗಿ ನೊಂದಾಯಿಸಿಕೊಳ್ಳಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಅಕಾಡೆಮಿಯ ಅಧಿಕಾರಿಗಳನ್ನು (ಪೊ: 9845258894 & 9880405181) ಸಂಪರ್ಕಿಸಬಹುದಾಗಿದೆ ಅಥವಾ ಅಕಾಡೆಮಿಯ ವೆಬ್ ಸೈಟ್ https //:kstacademy.in ವೀಕ್ಷಿಸಬಹುದಾಗಿದೆ.

ವಿಶ್ವ ವಿಕಲಚೇತನರ ದಿನಾಚರಣೆಯಲ್ಲಿ ನ್ಯಾಯಮೂರ್ತಿ ಸಿ.ಎಸ್. ಶಿವನಗೌಡ್ರ

# ವಿಕಲಚೇತನರಿಗೆ ಅನುಕಂಪವಲ್ಲ, ಅವಕಾಶ ನೀಡಿ

■ವಿಜಯಸಾಕ್ಷಿ ಸುದ್ದಿ, ಗದಗ

ನಮ್ಮ ಭಾರತೀಯ ಸಂವಿಧಾನದ ಅನುಚ್ಛೇದ 21ರಲ್ಲಿ ಪ್ರತಿಯೊಬ್ಬರೂ ಗೌರವಯುತವಾಗಿ ಬದುಕಬೇಕೆಂದು ಹೇಳಿದೆ. ವಿಶೇಷ ಚೇತನರು ಸಾಮಾನ್ಯರಿಗಿಂತ ಕಡಿಮೆ ಇಲ್ಲ. ಅವರಿಗೆ ವಿಶೇಷವಾದ ಬುದ್ಧಿಶಕ್ತಿ ಇದ್ದು, ಅವರ ಆಸಕ್ತಿಗೆ ತಕ್ಕಂತೆ ಅವರಿಗೆ ಶಿಕ್ಷಣ ನೀಡಬೇಕು ಎಂದು ಹಿರಿಯ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡ್ರ ಹೇಳಿದರು.

ಅವರು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ವಕೀಲರ ಸಂಘ ಹಾಗೂ ಸ್ಪಂದನಾ ಕಿವುಡ ಮತ್ತು ಮೂಗರ ವಸತಿ ಶಾಲೆ ಗದಗ ಇವರ ಸಂಯುಕ್ತಾಶ್ರಯದಲ್ಲಿ ಸ್ಪಂದನಾ ಶಿಕ್ಷಣ ಸಂಸ್ಥೆಯಲ್ಲಿ ಹಮ್ಮಿಕೊಂಡಿದ್ದ ವಿಕಲಚೇತನರ ದಿನಾಚರಣೆ ಕಾರ್ಯಕ್ರಮವನ್ನು ಸಸಿಗೆ ನೀರೆರೆಯುವುದರ ಮೂಲಕ ಉದ್ಘಾಟಿಸಿ ಮಾತನಾಡಿದರು.




ಆರ್‌ಪಿಡಬ್ಲ್ಯೂ ಕಾಯ್ದೆ-2016ರ ಅಡಿಯಲ್ಲಿ 21 ವಿಕಲಾಂಗ ಪಟ್ಟಿ ಬಿಡುಗಡೆಗೊಳಿಸಿದೆ. ಇಂತಹ ವಿಕಲಾಂಗರು ವಿಕಲಚೇತನ ಗುರುತಿನ ಚೀಟಿ ಪಡೆದು ಸರ್ಕಾರದ ಸೌಲಭ್ಯ ಪಡೆಯಲು ಅವರಿಗೆ ಅರಿವು ಮೂಡಿಸಬೇಕು. ಇಂತಹ ಮಕ್ಕಳನ್ನು ನೋಡಿಕೊಳ್ಳುತ್ತಿರುವ ಶಾಲೆಯ ಮುಖ್ಯಸ್ಥರು ಹಾಗೂ ಶಿಕ್ಷಕರ ಸೇವೆ ಅಭಿನಂದನೀಯವಾಗಿದೆ. ಸಾಮಾನ್ಯರಂತೆ ಇವರೂ ಸಹ ಗೌರವಯುತವಾಗಿ ಬದುಕಲು ಸಮಾಜದಲ್ಲಿನ ಪ್ರತಿಯೊಬ್ಬರೂ ಕೈಜೋಡಿಸಿ ವಿಕಲಚೇತನರಿಗೆ ಅವಕಾಶ ನೀಡಿ ಎಂದು ನುಡಿದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಶ್ರೀ ವೆಂಕಟೇಶ್ವರ ಗ್ರಾಮಾಂತರ ಶಿಕ್ಷಣ ಸಮಿತಿಯ ಅಧ್ಯಕ್ಷರಾದ ಡಾ. ಎಸ್.ಎಫ್. ದ್ಯಾವನಗೌಡರ ಅವರು ಶಿಕ್ಷಣ ಸಂಸ್ಥೆ ನಡೆದುಬಂದ ಬಗ್ಗೆ ಪ್ರಾಸ್ತಾವಿಕ ನುಡಿಗಳನ್ನಾಡಿದರು. ನಂತರ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

ವಿಶೇಷ ಚೇತನರ ಹಕ್ಕುಗಳು ಅವರಿಗೆ ಸುಲಭವಾಗಿ ಸಿಗುವಂತೆ ನೋಡಿಕೊಳ್ಳಬೇಕು. ಅವರು ತಮ್ಮ ಸ್ವಂತ ಬಲದ ಮೇಲೆ ಸಮಾಜದಲ್ಲಿ ಬದುಕುವಂತೆ ನೋಡಿಕೊಳ್ಳುವುದು ಪ್ರತಿಯೊಬ್ಬರ ಆದ್ಯ ಕರ್ತವ್ಯವಾಗಿದೆ. ಸಮಾಜದಲ್ಲಿ ಸಾಮಾನ್ಯ ಜನರಂತೆ ವಿಶೇಷ ಚೇತನರಿಗೂ ಹೆಮ್ಮೆಯಿಂದ ಜೀವನ ನಡೆಸಲು ಅವಕಾಶ ನೀಡಬೇಕು. ಅವರ ಹಕ್ಕುಗಳ ಬಗ್ಗೆ ಅರಿವುಮೂಡಿಸುವ ಉದ್ದೇಶದಿಂದ ಪ್ರತೀ ವರ್ಷ ಡಿಸೆಂಬರ್ 3ರಂದು ವಿಶೇಷ ಚೇತನರ ದಿನಾಚರಣೆ ಆಚರಿಸಲಾಗುತ್ತಿದೆ ಎಂದು ನ್ಯಾಯಮೂರ್ತಿ ಸಿ.ಎಸ್. ಶಿವನಗೌಡ್ರ ತಿಳಿಸಿದರು

# ವರ್ಷಿಣಿ ಅಭಿನಯಕ್ಕೆ ಪ್ರೇಕ್ಷಕರ ಮೆಚ್ಚುಗೆ



■ವಿಜಯಸಾಕ್ಷಿ ಸುದ್ದಿ, ಗದಗ

ನಟರಂಗ ಸಾಂಸ್ಕೃತಿಕ ಕೇಂದ್ರ ಗದಗ ಸಂಸ್ಥೆಯ ಮಕ್ಕಳಿಂದ ಪುಣ್ಯಕೋಟಿ ರೂಪಕ ಪ್ರದರ್ಶನ ನಗರದ ಶ್ರೀ ಜಗದ್ಗುರು ತೋಂಟದಾರ್ಯ ಮಠದ ಆವರಣದಲ್ಲಿ ಜರುಗಿತು. ಈ ರೂಪಕ ಪ್ರದರ್ಶನದಲ್ಲಿ ವರ್ಷಿಣಿ ಗಂಗಣ್ಣವರ ಗೊಲ್ಲನ ಹೆಂಡತಿಯ ಪಾತ್ರದಲ್ಲಿ ತಮ್ಮ ಅಭಿನಯದಿಂದ ಪ್ರೇಕ್ಷಕರ ಮೆಚ್ಚುಗೆಗೆ ಪಾತ್ರರಾಗಿದ್ದಾಳೆ. ಇಂತಹ ಕಾರ್ಯಕ್ರಮಗಳು ಮಕ್ಕಳಿಂದ ಮಾಡಿಸುತ್ತಿರುವ ನಟರಂಗ ಸಾಂಸ್ಕೃತಿ ಕೇಂದ್ರದ ಅಧ್ಯಕ್ಷ ಸೋಮು ಚಿಕ್ಕಮಠ, ಪುಣ್ಯಕೋಟಿ ನಾಟಕದ ನಿರ್ದೇಶಕ ಮಾಂತೇಶ್ ಗಜೇಂದ್ರಗಡ ಹಾಗೂ ತಂಡದ ಎಲ್ಲ ಸದಸ್ಯರಿಗೆ ಅಭಿನಂದಿಸಿದ್ದಾರೆ.

ಧಾರವಾಡ ರಂಗಾಯಣ ನಿರ್ದೇಶಕರಾದ ರಾಜು ತಾಳಿಕೋಟಿ, ಡಾ. ಜಿ.ಬಿ. ಪಾಟೀಲ್, ವಿವೇಕಾನಂದಗೌಡ ಪಾಟೀಲ್, ಪ್ರೊ. ಕೆ.ಎಚ್. ಬೇಲೂರ, ಶ್ರೀನಿವಾಸ್ ಹುಯಿಲಗೋಳ, ಚನ್ನವೀರಶಾಸ್ತ್ರಿ ಖಡಣಿ, ವಿಜಯಕುಮಾರ ಹಿರೇಮಠ, ಪ್ರೊ. ಬಾಹುಬಲಿ ಜೈನರ, ಅಜಿತ್ ಘೋರ್ಪಡೆ, ರಂಗಾಯಣದ ಕೇಶವ್ ಬಡಿಗೇರ್, ಸೋಮಶೇಖರ್ ಚಿಕ್ಕಮಠ, ಪೂಜಾ ಸೋಮಶೇಖರ್ ಚಿಕ್ಕಮಠ, ಬಸವರಾಜ ಮುಖಂಡಮಠ, ನಾಗರಾಜ ಮಿಸಾಳ, ನಾಗರಾಜ ಬಡಿಗೇರ, ಅಕ್ಷತಾ ಹಿರೇಮಠ, ಜ್ಯೋತಿ ಅಲ್ಲುಂದಿ, ಮಹಾಂತೇಶ ಹೂಗಾರ, ಸಂತೋಷ ಜಾಲಿಯಾಳ, ಚಂದ್ರಶೇಖರ ಗಂಗಣ್ಣವರ, ಶ್ರೀಮತಿ ಪ್ರಭಾ ಚ. ಗಂಗಣ್ಣವರ ಹಾಗೂ ವೀರಪ್ಪ ವೀರವ್ವ ಹೊಸಳ್ಳಿ ಸೇರಿದಂತೆ ಅನೇಕರು ಪ್ರೇಕ್ಷಕರು ರೂಪಕವನ್ನು ವೀಕ್ಷಿಸಿ ಮಕ್ಕಳ ಅಭಿನಯವನ್ನು ಶ್ಲಾಘಿಸಿದರು.

# ವಿದ್ಯಾರ್ಥಿಗಳು ಸ್ಪರ್ಧೆಗಳಲ್ಲಿ ಭಾಗವಹಿಸುವುದು ಮುಖ್ಯ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ವಿದ್ಯಾರ್ಥಿಗಳಲ್ಲಿನ ಪ್ರತಿಭೆಯನ್ನು ಹೊರತೆಗೆದು ಅದನ್ನು ಜಗತ್ತಿಗೆ ಪರಿಚಯಿಸುವದಕ್ಕೆಂದೇ ಸ್ಪರ್ಧೆಗಳಿರುತ್ತವೆ. ಈ ಸ್ಪರ್ಧೆಗಳಲ್ಲಿ ವಿದ್ಯಾರ್ಥಿಗಳು ಭಾಗವಹಿಸುವುದು ಮುಖ್ಯ ಎಂದು ಸರಕಾರಿ ಹೆಣ್ಣು ಮಕ್ಕಳ ಶಾಲೆಯ ಶಿಕ್ಷಕ ಜೆ.ಎ. ಪಾಟೀಲ ಹೇಳಿದರು.

ವಿಶೇಷ ಅಗತ್ಯತೆಯುಳ್ಳ ಮಕ್ಕಳ ದಿನಾಚರಣೆ ನಿಮಿತ್ತ ನಡೆದ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ಮಕ್ಕಳಿಗೆ ಬಹುಮಾನ ವಿತರಿಸಿ ಅವರು ಮಾತನಾಡಿದರು.

ಸ್ಪರ್ಧೆಯನ್ನು ಎಂದಿಗೂ ಸ್ಪರ್ಧಾತ್ಮಕವಾಗಿಯೇ ನೋಡಬೇಕು. ನನಗೆ ಬಹುಮಾನ ಬರಲಿಲ್ಲ ಎಂದು ಎಂದಿಗೂ ಕೊರಗದೆ ಮತ್ತೆ ಮತ್ತೆ ಪ್ರಯತ್ನಿಸಿ ಬಹುಮಾನ ಪಡೆಯಲು ಪ್ರಯತ್ನಿಸಬೇಕು. ನಿಮಗೆ ಯಾವ ವಿಷಯದಲ್ಲಿ, ಯಾವ ಕಲೆಯಲ್ಲಿ ಆಸಕ್ತಿಯಿದೆಯೋ ಅದೇ ಕಲೆಯಲ್ಲಿ, ವಿಷಯದಲ್ಲಿ ಸತತ ಸಾಧನೆ ಮಾಡಿದರೆ ಒಂದಲ್ಲ ಒಂದು ದಿನ ನೀವು ಗೆದ್ದೇ ಗೆಲ್ಲುತ್ತೀರಿ. ಈ ಆತ್ಮ ವಿಶ್ವಾಸವನ್ನು ನೀವು ನಿಮ್ಮಲ್ಲಿ ಯಾವಾಗಲೂ ಹೊಂದಿರಬೇಕೆಂದು ಹೇಳಿದರು.

ಮುಖ್ಯ ಶಿಕ್ಷಕ ಬಿ.ಬಿ. ಕುರಿ ಬಹುಮಾನಗಳನ್ನು ವಿತರಿಸಿ, ಇಲ್ಲಿ ಸೋಲು-ಗೆಲುವು ಮುಖ್ಯವಲ್ಲ. ಭಾಗವಹಿಸುವಿಕೆ ಮುಖ್ಯವಾಗುತ್ತದೆ. ಅದನ್ನು ನೀವು ಮಾಡಿರುವುದು ನಮಗೆಲ್ಲರಿಗೂ ಸಂತೋಷ ತಂದಿದೆ ಎಂದರು.

ವಿಶೇಷ ಮಕ್ಕಳ ದಿನಾಚರಣೆ ನಿಮಿತ್ತ ಇಕೋ ಕ್ಲಬ್ ವತಿಯಿಂದ ನಡೆದ ಪರಿಸರ ಕುರಿತ ಪ್ರಬಂಧ ಸ್ಪರ್ಧೆ, ರಸಪ್ರಶ್ನೆ ಸ್ಪರ್ಧೆ, ಚಿತ್ರಕಲಾ ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ಬಹುಮಾನ ವಿತರಿಸಲಾಯಿತು. ಶಾಲಾ ಸಿಬ್ಬಂದಿಯವರು ಉಪಸ್ಥಿತರಿದ್ದರು.

ನಿವೃತ್ತ ನೌಕರರ ಸಂಘದಿಂದ ಹಿರಿಯ ನಾಗರಿಕರ ಆರೋಗ್ಯ ಕುರಿತು ವ್ಯದ್ಯಕೀಯ ಸಲಹೆ

# ಚಳಿಗಾಲದಲ್ಲಿ ನಿಮ್ಮ ಆರೋಗ್ಯ ಕಾಪಾಡಿಕೊಳ್ಳಿ



■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ನಿವೃತ್ತ ನೌಕರರ ಸಂಘ ಗದಗ ಜಿಲ್ಲಾ ಘಟಕ, ಬಸವೇಶ್ವರ ನಗರದಲ್ಲಿ ನಿವೃತ್ತ ನೌಕರರ ಸಂಘದ ಡಿಸೆಂಬರ್ ತಿಂಗಳಲ್ಲಿ ಜನಿಸಿದ ಸಂಘದ ಸದಸ್ಯರ ಜನ್ಮದಿನಾಚರಣೆ ಕಾರ್ಯಕ್ರಮ ಜರುಗಿತು.

ನಿವೃತ್ತ ಪ್ರಾಚಾರ್ಯ ಡಾ. ಎನ್.ಎಂ. ಅಂಬಲಿಯವರು ಕನಕದಾಸರ ಕುರಿತು ಮಾತನಾಡಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಂಘದ ಅಧ್ಯಕ್ಷರಾದ ಪ್ರೊ. ಕೆ.ಎಚ್. ಬೇಲೂರ ವಹಿಸಿಕೊಂಡಿದ್ದರು.

ಹುಟ್ಟುಹಬ್ಬ ಆಚರಿಸಿಕೊಂಡ ವಿ.ಎಲ್. ಅಯ್ಯನಗೌಡರ, ಎನ್. ಆರ್. ಕುಲಕರ್ಣಿ, ಎ.ಯು. ತಂಡರ ಮುಂತಾದವರಿಗೆ ಶುಭ ಕೋರಲಾಯಿತು. ಬಿ.ಡಿ. ಕಿಲಬನವರ ಸಂಘದ ಅಧ್ಯಕ್ಷರಿಗೆ ಕಾಲರ್ ಧಾರಣೆ ಮಾಡಿದರು. ವೇದಿಕೆಯಲ್ಲಿ ಉಪಾಧ್ಯಕ್ಷರಾದ ಎಸ್.ಡಿ. ಗೌಡಪ್ಪಗೌಡರ, ಜಿ.ವ್ಹಿ. ಮಳಲಿ, ಬಿ.ಎಂ. ಬಿಳೆಯಲಿ ಉಪಸ್ಥಿತರಿದ್ದರು. ಪಿ.ಟಿ. ನಾರಾಯಣಪೂರ, ವಾಯ್.ಕೆ. ಪಿಡಗಣ್ಣವರ, ಆರ್.ವ್ಹಿ. ಕುಪ್ಪಸ್ತ, ಎಂ.ಕೆ. ಬಡಿಗೇರ, ಬಿ.ಜೆ. ಪಾಟೀಲ, ಎಂ.ಎಫ್. ಡೋಣಿ, ಜಿ.ಕೆ. ತಮ್ಮಣ್ಣವರ, ಬಿ.ಎಸ್. ಹಿಂಡಿ, ಜಿ.ಎಂ. ಯಾಮನಶೆಟ್ಟಿ, ಎ.ಎನ್. ಬಸ್ತಿ, ಮಣಕವಾಡ ಡಾ. ಎಂ.ವ್ಹಿ. ಐಹೋಳಿ, ಜಿ.ಕೆ. ಮಡಿವಾಳರ, ಇ.ಎ. ಯಳವತ್ತಿ, ವ್ಹಿ.ಬಿ. ಗಡದರ, ಜಿ.ಎಸ್. ಸಜ್ಜನರ, ವ್ಹಿ.ಎ. ಸೋನಾರ, ಎಂ.ಆರ್. ಸಿಂದಗಿ ರತ್ನಾ ಘಾರ್ಗಿ, ರತ್ನಾ ಪುರಂತರ, ಪರಿಮಳಾ ನಂದರಗಿ, ಶೈಲಜಾ ಕಪ್ಪರದ, ಮಂಗಲಾ ಯಾಮನಶೆಟ್ಟಿ, ಬಿಂಕದಕಟ್ಟಿ, ಮಮತಾಜಬೇಗಂ ಡಂಬಳ, ಮುಜಾವರ, ಆರ್. ಎಚ್. ಮೇರವಾಡೆ, ಪಿ.ಎಸ್. ಸಿದ್ನೆಕೊಪ್ಪ, ಎಚ್.ಎಸ್. ದಂಡಿನ, ಶಕುಂತಲಾ ಬಿಜಲಿ ಮುಂತಾದವರು ಉಪಸ್ಥಿತರಿದ್ದರು.

ಸುಧಾ ಬಳ್ಳಿ ಪ್ರಾರ್ಥಿಸಿದರು, ಪ್ರೊ. ಎಂ.ಬಿ. ಹಳ್ಳಿ ಸ್ವಾಗತಿಸಿದರು. ಪ್ರೊ. ಎಂ.ಸಿ. ವಗ್ಗಿ ಕಾರ್ಯಕ್ರಮ ನಿರೂಪಿಸಿದರು. ಪ್ರೊ. ಬಿ.ಎಚ್. ಗರಡಿಮನಿ ವಂದಿಸಿದರು.

ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದ ಡಾ. ಜಿ.ಬಿ. ಬಿಡಿನಹಾಳ ಚಳಿಗಾಲದಲ್ಲಿ ಹಿರಿಯ ನಾಗರಿಕರು ಆರೋಗ್ಯ ಕಾಪಾಡಿಕೊಳ್ಳುವಲು ಅನುಸರಿಸಬೇಕಾದ ವೈದ್ಯಕೀಯ ಸಲಹೆಗಳನ್ನು ನೀಡಿ, ಸಾಮಾನ್ಯವಾಗಿ ಹಿರಿಯ ನಾಗರಿಕರಲ್ಲಿ ಚಳಿಗಾಲದಲ್ಲಿ ನೆಗಡಿ, ಕೆಮ್ಮು, ಜ್ವರ, ರಕ್ತ ಹೆಪ್ಪುಗಟ್ಟುವ, ದೇಹದ ಅಂಗಾಗಳಲ್ಲಿ ಸಂಧಿ ನೋವು ಮುಂತಾದ ಸಾಮಾನ್ಯ ಕಾಯಿಲೆಗಳು ಕಾಣಿಸಿಕೊಳ್ಳುತ್ತವೆ. ಹಿರಿಯರು ಚಳಿಗಾಲದಲ್ಲಿ ಎಳೆ ಬಿಸಿಲಲ್ಲಿಯೇ ವಾಯುವಿಹಾರ ಮಾಡುವುದು ಒಳ್ಳೆಯದು. ಇದರಿಂದ ಸೂರ್ಯನ ಬಿಸಿಲಿನಲ್ಲಿರುವ ವಿಟಾಮಿನ್ ಡಿ ಅಂಶ ಶರೀರಕ್ಕೆ ದೊರಕಿ ಅವು ನಮ್ಮಲ್ಲಿಯ ರೋಗನಿರೋಧಕ ಶಕ್ತಿಯನ್ನು ಹೆಚ್ಚಿಸುತ್ತದೆ ಎಂದರು.

# ಕೃಷಿ ಉದ್ಯಮಶೀಲತಾ ಮಾರ್ಗದರ್ಶನ ಕಾರ್ಯಕ್ರಮ



■ವಿಜಯಸಾಕ್ಷಿ ಸುದ್ದಿ, ಧಾರವಾಡ

ಇಲ್ಲಿನ ಕೃಷಿ ವಿಶ್ವವಿದ್ಯಾಲಯದಲ್ಲಿ ನಡೆದ 'ಕೃಷಿಕ' ನವೋದ್ಯಮ ಪೋಷಣಾ ಕೇಂದ್ರದ ಕೃಷಿ ಉದ್ಯಮಶೀಲತಾ ಮಾರ್ಗದರ್ಶನ ಕಾರ್ಯಕ್ರಮವನ್ನು ಧಾರವಾಡ ಕೃಷಿ ವಿಶ್ವವಿದ್ಯಾಲಯದ ಕುಲಪತಿ ಡಾ. ಪಿ.ಎಲ್. ಪಾಟೀಲ ಉದ್ಘಾಟಿಸಿದರು.

ಈ ಕಾರ್ಯಕ್ರಮವು ಭಾರತ ಸರ್ಕಾರದ ಕೃಷಿ ಹಾಗೂ ರೈತರ ಕಲ್ಯಾಣ ಸಚಿವಾಲಯದ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ-ರಫ್ತಾರ ಘಟಕದಿಂದ ಪ್ರಾಯೋಜಿಸಲ್ಪಟ್ಟಿತ್ತು. ಒಂದು ವಾರದ ತರಬೇತಿಗಾಗಿ 23 ನೂತನ ಕೃಷಿ ನವೋದ್ಯಮಗಳನ್ನು ಆಯ್ಕೆ ಮಾಡಲಾಗಿದೆ. ಸಂಭಾವ್ಯ ಕೃಷಿ ಉದ್ಯಮಿಗಳಿಗೆ ತರಬೇತಿ ಹಾಗೂ ಮಾರ್ಗದರ್ಶನದ ಮೂಲಕ ವಿನೂತನ ಕೃಷಿ ನವೋದ್ಯಮ ಆರಂಭಿಸಲು ಪ್ರಾಯೋಗಿಕ, ತಾಂತ್ರಿಕ ಮತ್ತು ಔದ್ಯೋಗಿಕ ಮಾರ್ಗದರ್ಶನ ಒದಗಿಸುವುದು ಈ ಕಾರ್ಯಕ್ರಮದ ಉದ್ದೇಶವಾಗಿದೆ.

ಪ್ರಧಾನ ಸಂಶೋಧಕ ಹಾಗೂ 'ಕೃಷಿಕ' ನವೋದ್ಯಮ ಪೋಷಣಾ ಕೇಂದ್ರದ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಎಸ್.ಎಸ್. ಡೊಳ್ಳಿ ಸ್ವಾಗತಿಸಿದರು. ಕೃಷಿ ವಿಶ್ವವಿದ್ಯಾಲಯದ ವಿಸ್ತರಣಾ ನಿರ್ದೇಶಕ ಡಾ. ಆರ್.ಬಸವರಾಜಪ್ಪ, 'ಕೃಷಿಕ' ನವೋದ್ಯಮ ಪೋಷಣಾ ಕೇಂದ್ರದ ಕೋ.ಪಿ.ಐ ಡಾ. ಬಸವರಾಜ ಗಾಳಿ ಹಾಗೂ ರಫ್ತಾರ್ ಸಿಬ್ಬಂದಿ ಉಪಸ್ಥಿತರಿದ್ದರು.

# ಕಳಕಪ್ಪನ ಕೈಯಲ್ಲಿ ಅರಳಿದ ಮಣ್ಣಿನ ಮೂರ್ತಿ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸಮೀಪದ ಜಕ್ಕಲಿ ಗ್ರಾಮದ ಶ್ರೀ ಅಂದಾನಪ್ಪ ಜ್ಞಾನಪ್ಪ ದೊಡ್ಡಮೇಟಿ ಸರ್ಕಾರಿ ಪ್ರೌಢಶಾಲೆಯ 9ನೇ ತರಗತಿ ವಿದ್ಯಾರ್ಥಿ ಕಳಕಪ್ಪ ನಾಗಪ್ಪ ಬಂಡಿ ಆದಿಯೋಗಿಯ ಅದ್ಭುತವಾದ ಮಣ್ಣಿನ ಮೂರ್ತಿ ತಯಾರಿಸಿದ್ದಾನೆ.

ವಿದ್ಯಾರ್ಥಿಗಳಿಗಾಗಿ ಆನ್‌ಲೈನ್‌ನಲ್ಲಿ ನಡೆಯುವ ಸ್ಪರ್ಧೆಗಾಗಿ ಈ ಮಣ್ಣಿನ ಮೂರ್ತಿಯನ್ನು ಕಳಕಪ್ಪ ತಯಾರಿಸಿದ್ದು, ಅವನಿಗೆ ಚಿತ್ರಕಲಾ ಶಿಕ್ಷಕ ನೆಹರೂ ಮನೋಳಿ ಸೂಕ್ತ ಮಾರ್ಗದರ್ಶನ ನೀಡಿದ್ದಾರೆ. ಕಳಕಪ್ಪನ ಈ ಕಾರ್ಯಕ್ಕೆ ಶಾಲೆಯ ಎಸ್.ಡಿ.ಎಂ.ಸಿ, ಅಧ್ಯಕ್ಷರು, ಸದಸ್ಯರ, ಮುಖ್ಯೋಪಾಧ್ಯಾಯರು ಹಾಗೂ ಸಿಬ್ಬಂದಿಯವರ ಸಹಕಾರ ದೊರೆತಿರುವುದು ವಿದ್ಯಾರ್ಥಿಯ ಸಾಧನೆಗೆ ಕಾರಣವಾಗಿದೆ.

ಆನ್‌ಲೈನ್ ಸ್ಪರ್ಧೆಗೆಂದು ಈ ಮಣ್ಣಿನ ಮೂರ್ತಿಯನ್ನು ತಯಾರಿಸಿದ್ದೇನೆ. ಗುಳ್ಳವ್ವನ ಕೆರೆಯಿಂದ ಮಣ್ಣು ತಂದು ನಮ್ಮ ಚಿತ್ರಕಲಾ ಶಿಕ್ಷಕರ ಮಾರ್ಗದರ್ಶನದಿಂದ ಈ ಆದಿಯೋಗಿ ಮೂರ್ತಿಯನ್ನು ಎರಡು ಗಂಟೆಯೊಳಗೆ ತಯಾರಿಸಿದ್ದೇನೆ. ಭವಿಷ್ಯದಲ್ಲಿ ಉತ್ತಮ ಕಲಾಕಾರನಾಗುವ ಕನಸನ್ನು ಹೊಂದಿದ್ದೇನೆ ಎನ್ನುತ್ತಾನೆ ವಿದ್ಯಾರ್ಥಿ ಕಳಕಪ್ಪ.

ವಿದ್ಯಾರ್ಥಿಯ ಸಹಜ ಆಸಕ್ತಿಯನ್ನು ಪ್ರೋತ್ಸಾಹಿಸುವ ಕೆಲಸವನ್ನು ಮಾಡಿದ್ದೇನೆ. ವಿದ್ಯಾರ್ಥಿಗಳು ಇಚಿಥಹ ಸ್ಪರ್ಧೆಗಳಲ್ಲಿ ಭಾಗವಹಿಸುವದು ಮುಖ್ಯ. ಕಳಕಪ್ಪನಲ್ಲಿ ಈ ಆಸಕ್ತಿ ಇತ್ತು. ಹೀಗಾಗಿ ಆತ ಈ ಮಣ್ಣಿನ ಮೂರ್ತಿಯನ್ನು ಅತ್ಯಂತ ಸುಂದರವಾಗಿ ನಿರ್ಮಿಸಿದ್ದಾನೆ ಎಂದು ಚಿತ್ರಕಲಾ ಶಿಕ್ಷಕ ನೆಹರೂ ಮನೋಳಿ ಸಚಿತಸ ವ್ಯಕ್ತಪಡಿಸಿದ್ದಾರೆ. ವಿದ್ಯಾರ್ಥಿಯ ಈ ಕಲಾ ಪ್ರತಿಭೆಗೆ ಗ್ರಾಮಸ್ಥರು, ಶಿಕ್ಷಕ ವೃಂದ ಮೆಚ್ಚುಗೆ ವ್ಯಕ್ತಪಡಿಸಿ ಶುಭ ಹಾರೈಸಿದ್ದಾರೆ.

# 'ಪೋಷಕರ ನೆನಪು-ಪತ್ರ ವಾಚನ' ಕಾರ್ಯಕ್ರಮ

■ವಿಜಯಸಾಕ್ಷಿ ಸುದ್ದಿ, ಗದಗ

ಪೋಷಕರು ನಮ್ಮ ಜೀವನದ ಅಡಿಗಲ್ಲುಗಳು. ಅವರ ಪ್ರೀತಿಯ ತ್ಯಾಗ, ಮಾರ್ಗದರ್ಶನ, ಮತ್ತು ಬೆಂಬಲವೇ ನಮ್ಮ ಜೀವನದ ಬೆಳಕು. ಪೋಷಕರನ್ನು ನೆನೆಯುತ್ತಾ ಕಾರ್ಯಕ್ರಮದಲ್ಲಿ ಅವರನ್ನು ಸ್ಮರಿಸುವ, ಅವರಿಗೆ ಕೃತಜ್ಞತೆ ಸಲ್ಲಿಸುವ ಒಂದು ವಿಶೇಷ ದಿನವಾಗಿ, ತೋಂಟದಾರ್ಯ ಇಂಜಿನಿಯರಿಂಗ್ ಕಾಲೇಜಿನಲ್ಲಿ ಪತ್ರ ಬರೆಯುವ ಮೂಲಕ ಆಚರಿಸಲಾಯಿತು. ಎಲ್ಲಾ ವಿದ್ಯಾರ್ಥಿಗಳು ತಮ್ಮ ಹಸ್ತಲಿಖಿತ ಪತ್ರವನ್ನು ಬರೆದು, ಸಾಮೂಹಿಕವಾಗಿ ಅದನ್ನು ಓದಿ, ತಂತಮ್ಮ ಮನೆಗೆ ಅಂಚೆ ಮೂಲಕ ಕಳಿಸಿದರು.




ಈ ವಿಶೇಷ ಪತ್ರ ವಾಚನ ಕಾರ್ಯಕ್ರಮವನ್ನು ಉದ್ಘಾಟಿಸಿದ ಪ್ರಾಂಶುಪಾಲ ಡಾ. ಎಮ್. ಎಮ್. ಅವಟಿ ಮಾತನಾಡಿ, ತಂದೆ-ತಾಯಿಗಳೇ ನಮ್ಮ ಪ್ರಥಮ ಗುರುಗಳು ಮತ್ತು ಮಾರ್ಗದರ್ಶಕರು ಎಂದರು. ಎಲೆಕ್ಟ್ರಿಕಲ್ ವಿಭಾಗದ ಮುಖ್ಯಸ್ಥ ಡಾ. ಈರಣ್ಣ ಕೋರಚಗಾಂವ ಸಾಂದರ್ಭಿಕವಾಗಿ ಮಾತನಾಡಿದರು.

ಕಾರ್ಯಕ್ರಮವನ್ನು ಪ್ರೊ. ಮಲ್ಲಿಕಾರ್ಜುನ ಜಿ.ಡಿ. ಮತ್ತು ಪ್ರೊ. ತೆಹಸಿನ್ ಶಿಗ್ಲಿ, ನಡೆಸಿಕೊಟ್ಟರು. ಪ್ರೊ. ಜಗದೀಶ ಶಿವನಗುತ್ತಿ ವಂದಿಸಿದರು. ಪ್ರೊ. ಗೌತಮ ರೇವಣಕರ, ಪ್ರೊ. ದಯಾನಂದ ಗೌಡರ, ಪ್ರೊ. ಲೋಕೇಶ, ಪ್ರೊ. ರಮೇಶ ಬಡಿಗೇರ, ಪ್ರೊ. ಆರ್.ವಿ. ಕಡಿ, ಪ್ರೊ. ಐ.ಎಸ್. ಪಾಟೀಲ, ಪ್ರೊ. ಅಶ್ವಿನಿ ಅರಳಿ, ಪ್ರೊ. ಶೈಲಜಾ ಮುದೇನಗುಡಿ, ಪ್ರೊ. ಲೋಹಿತ್, ಪ್ರೊ. ಪ್ರಸನ್ನ ನಾಡಗೌಡ, ಪ್ರೊ. ಸುನಿಲ ಪಾಟೀಲ, ಪ್ರೊ. ವೀರೇಶ ಮಾಗಳದ, ಪ್ರೊ. ವಿಜಯಕುಮಾರ ಮಾಲಗಿತ್ತಿ, ಪ್ರೊ. ಮಹಾಂತ ಕಟ್ಟಿಮನಿ, ಪ್ರೊ. ಬಸವರಾಜ ಪಾಟೀಲ ಅವರನ್ನೊಳಗೊಂಡು ಇತರ ಶಿಕ್ಷಕರು ಮತ್ತು ಸಿಬ್ಬಂದಿ ವರ್ಗದವರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

# ಚುನಾವಣಾ ಆಯೋಗ ಮಾಧ್ಯಮ ಪ್ರಶಸ್ತಿಗಾಗಿ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಭಾರತ ಚುನಾವಣಾ ಆಯೋಗವು ಚುನಾವಣೆಗೆ ಸಂಬಂಧಿಸಿದಂತೆ ಮತದಾರರ ಶಿಕ್ಷಣ ಮತ್ತು ಅರಿವು ಮೂಡಿಸುವಲ್ಲಿ 2024ನೇ ಸಾಲಿನಲ್ಲಿ ಅತ್ಯುತ್ತಮ ಪ್ರಚಾರ ಕಾರ್ಯಕ್ರಮ ಹಮ್ಮಿಕೊಂಡ ಮಾಧ್ಯಮಗಳಾದ ಮುದ್ರಣ ಮಾಧ್ಯಮ, ವಿದ್ಯುನ್ಮಾನ ಮಾಧ್ಯಮದ ಟಿ.ವಿ ಮತ್ತು ರೇಡಿಯೋ ಹಾಗೂ ಸಾಮಾಜಿಕ ಮಾಧ್ಯಮಗಳಿಗೆ ಸಂಬಂಧಿಸಿದಂತೆ ಭಾರತ ಚುನಾವಣಾ ಆಯೋಗವು ಮೀಡಿಯಾ ಅವಾರ್ಡ್-2024 ನೀಡಲು ಅರ್ಜಿ ಆಹ್ವಾನಿಸಿದೆ.

ರಾಜ್ಯದ ಆಸಕ್ತ ಮಾಧ್ಯಮ ಸಂಸ್ಥೆಗಳು ಭಾಗವಹಿಸಬಹುದು. ಮಾಧ್ಯಮ ಸಂಸ್ಥೆಗಳು ಡಿಸೆಂಬರ 12, 2024 ರೊಳಗಾಗಿ ನೇರವಾಗಿ ಭಾರತ ಚುನಾವಣಾ ಆಯೋಗಕ್ಕೆ ತಮ್ಮ ಮಾಧ್ಯಮದ ಮೂಲಕ ಮತದಾರರ ಶಿಕ್ಷಣ ಮತ್ತು ಅರಿವು ಮೂಡಿಸುವಲ್ಲಿ 2024 ನೇ ಸಾಲಿನಲ್ಲಿ ಅತ್ಯುತ್ತಮ ಪ್ರಚಾರ ಕಾರ್ಯಕ್ರಮ ಹಮ್ಮಿಕೊಂಡ ಬಗ್ಗೆ ಪ್ರಸ್ತಾವನೆಯನ್ನು ಮುಖ್ಯ ಚುನಾವಣಾಧಿಕಾರಿಗಳ ಕಚೇರಿ, ನಿರ್ವಾಚನಾ ನಿಲಯ, ಶೇಷಾದ್ರಿ ರಸ್ತೆ, ಬೆಂಗಳೂರು-560001 ಇಲ್ಲಿಗೆ ಸಲ್ಲಿಸಬಹುದಾಗಿದೆ ಎಂದು ಸಹಾಯಕ ಮುಖ್ಯ ಚುನಾವಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಕರ್ನಾಟಕ ರಾಜ್ಯ ಸರಕಾರಿ ನೌಕರ ಸಂಘದ ಗದಗ ಜಿಲ್ಲಾ ಘಟಕಕ್ಕೆ ನಿರ್ದೇಶಕರಾಗಿ ಆಯ್ಕೆಯಾಗಿರುವ ಗದಗ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ತಾಲೂಕಾಧಿಕಾರಿ ಡಾ. ಬಸವರಾಜ ಬಳ್ಳಾರಿ ಅವರ ಸಾಮಾಜಿಕ, ಧಾರ್ಮಿಕ, ಸಾಂಸ್ಕೃತಿಕ, ಶೈಕ್ಷಣಿಕ ಮತ್ತು ಸಂಘಟನಾತ್ಮಕ ಜೀವಮಾನದ ಸಾಧನೆಯ ಹಿನ್ನೆಲೆಯಲ್ಲಿ ಅವರು ಇತ್ತೀಚೆಗೆ ಜಪಾನ ದೇಶದ ರಾಜಧಾನಿ ಟೋಕಿಯೋದಲ್ಲಿ ವಿಶ್ವವಾಣಿ ಗ್ಲೋಬಲ್ ಅಚೀವರ್ಸ್ ಗೌರವ ಪಡೆದಿರುವ ಹಿನ್ನೆಲೆಯಲ್ಲಿ ಗದಗ ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಸಿಬ್ಬಂದಿಗಳಾದ ಜಿ.ಎನ್. ಮಲ್ಲೂರ, ಪತ್ರಕರ್ತ ಸುನೀಲಸಿಂಗ್ ಲದ್ದಿಗೇರಿ, ಸಾಮಾಜಿಕ ಕಾರ್ಯಕರ್ತರಾದ ಕರೀಮಸಾಬ ಸುಣಗಾರ, ಕುಮಾರ ದಹಿಂಡೆ, ಬಸವರಾಜ, ಸುರೇಂದ್ರಸಿಂಗ್ ಕಾಟೇವಾಲ ಮುಂತಾದವರು ಸನ್ಮಾನಿಸಿದರು.

### ರಸ್ತೆ ಸುರಕ್ಷತೆ ಅರಿವು ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಜಿಲ್ಲಾಧಿಕಾರಿ ದಿವ್ಯ ಪ್ರಭು

# ಸಂಚಾರ ನಿಯಮಗಳನ್ನು ತಪ್ಪದೇ ಪಾಲಿಸಿ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ರಸ್ತೆ ಸಂಚಾರಿ ನಿಯಮಗಳನ್ನು ಪ್ರತಿಯೊಬ್ಬರೂ ಪಾಲಿಸುವದರಿಂದ ಎಲ್ಲ ಸಂಚಾರಿಗಳು ಸುರಕ್ಷಿತವಾಗಿರುತ್ತಾರೆ. 2024ರ ಜನೆವರಿಯಿಂದ ನವೆಂಬರ್‌ವರಗೆ ಹುಬ್ಬಳ್ಳಿ-ಧಾರವಾಡ ಅವಳಿ ನಗರದಲ್ಲಿ 118 ವಾಹನ ಅಪಘಾತ ಪ್ರಕರಣಗಳಾಗಿದ್ದು, ಇದರಲ್ಲಿ 126 ಜನ ಸಾವಿಗೀಡಾಗಿದ್ದಾರೆ ಎಂದು ಜಿಲ್ಲಾ ರಸ್ತೆ ಸುರಕ್ಷತಾ ಸಮಿತಿ ಅಧ್ಯಕ್ಷರೂ ಆಗಿರುವ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಹೇಳಿದರು.

ಅವರು ಮಂಗಳವಾರ ಬೆಳಿಗ್ಗ ಜಿಲ್ಲಾಧಿಕಾರಿ ಕಚೇರಿ ಮುಂಭಾಗದಲ್ಲಿ ರಾಜ್ಯ ರಸ್ತೆ ಸುರಕ್ಷತಾ ಪ್ರಾಧಿಕಾರದಿಂದ ಆಯೋಜಿಸಿದ್ದ ಎಲ್.ಇ.ಡಿ ಸ್ಕ್ರೀನ್ ಹೊಂದಿರುವ ವಾಹನಗಳ ಮೂಲಕ ಸಾರ್ವಜನಿಕರಲ್ಲಿ ರಸ್ತೆ ಸುರಕ್ಷತೆ ಬಗ್ಗೆ ಅರಿವು ಮೂಡಿಸುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಧಾರವಾಡ ಜಿಲ್ಲೆಯಲ್ಲಿ ರಸ್ತೆ ಸಂಚಾರ ನಿಯಮಗಳ ಕುರಿತು ಸಾರ್ವಜನಿಕರ



ಜಾಗೃತಿಗಾಗಿ ವಿವಿಧ ಕಾರ್ಯಕ್ರಮಗಳನ್ನು ಜಿಲ್ಲಾ ರಸ್ತೆ ಸುರಕ್ಷತಾ ಪ್ರಾಧಿಕಾರದಿಂದ ಆಯೋಜಿಸಲಾಗಿದೆ. ಕರಪತ್ರ, ಪೋಸ್ಟರ್‌ಗಳ ಮೂಲಕ ಸಂಚಾರಿ ನಿಯಮಗಳ ಮಾಹಿತಿ ನೀಡಲಾಗಿದೆ ಎಂದು ಜಿಲ್ಲಾಧಿಕಾರಿಗಳು ಹೇಳಿದರು.

ಯುವಕ, ಯುವತಿಯರು ರಸ್ತೆ ಸಂಚಾರ ನಿಯಮಗಳನ್ನು ಪಾಲಿಸಬೇಕು. ವಾಹನ ಓಡಿಸುವಾಗ ತಲೆಗೆ ಹೆಲ್ಮೆಟ್, ಸೀಟ್ ಬೆಲ್ಟ್ ಧರಿಸಬೇಕು. ಸೂಚಿತ ವೇಗದ ಮಿತಿಯನ್ನು ಪಾಲಿಸಬೇಕು. ರಸ್ತೆ ಬದಿಯಲ್ಲಿ ಅಳವಡಿಸಿರುವ ಸೂಚನಾ ಫಲಕಗಳನ್ನು ಗಮನಿಸಬೇಕು ಎಂದು ಅವರು ತಿಳಿಸಿದರು.

ಕಾರ್ಯಕ್ರಮದಲ್ಲಿ ಸಾರಿಗೆ ಇಲಾಖೆ ಅಪರ ಸಾರಿಗೆ ಆಯುಕ್ತ ಕೆ.ಟಿ. ಹಾಲಸ್ವಾಮಿ, ಉಪ ಪೊಲೀಸ್ ಆಯುಕ್ತ ರವೀಶ ಸಿ.ಆರ್. ಮಾತನಾಡಿದರು. ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ಆಯುಕ್ತ ಡಾ. ಈಶ್ವರ ಉಳ್ಳಾಗಡ್ಡಿ ಹಾಗೂ ಸಾರಿಗೆ ಇಲಾಖೆ ಅಧಿಕಾರಿಗಳು ಇದ್ದರು. ಇದೇ ಸಂದರ್ಭದಲ್ಲಿ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಎಲ್ಲರೂ ರಸ್ತೆ ಸುರಕ್ಷತೆ ಪಾಲನೆ ಕುರಿತು ಪ್ರತಿಜ್ಞಾ ವಿಧಿ ಸ್ವೀಕರಿಸಿದರು.

ಪ್ರಾದೇಶಿಕ ಸಾರಿಗೆ ಅಧಿಕಾರಿ ಕೆ.ದಾಮೋದರ ಅವರು ಸ್ವಾಗತಿಸಿ, ಕಾರ್ಯಕ್ರಮ ನಿರೂಪಿಸಿದರು. ಕಚೇರಿ ಸಿಬ್ಬಂದಿ ಜಿ.ವಿ. ದಿನಮನಿ ವಂದಿಸಿದರು. ಕಾರ್ಯಕ್ರಮದಲ್ಲಿ ಸಾರ್ವಜನಿಕರು, ಶಾಲಾ-ಕಾಲೇಜು ವಿದ್ಯಾರ್ಥಿಗಳು ಭಾಗವಹಿಸಿದ್ದರು.

> ರಸ್ತೆ ಸಾರ್ವಜನಿಕರಿಗೆ ಸೇರಿದ್ದು, ಸ್ವೇಚ್ಛಾಚಾರಿಗಳಾಗಿ ತಮಗೆ ತಿಳಿದಂತೆ ರಸ್ತೆಗಳಲ್ಲಿ ವಾಹನ ಓಡಿಸಬಾರದು. ಇದರಿಂದ ಸವಾರನ ಜೊತೆಗೆ ಸಂಚರಿಸುವವರಿಗೆ ಮತ್ತು ಇತರ ಸಹ ಪ್ರಯಾಣಿಕರ ಪ್ರಾಣಕ್ಕೂ ತೊಂದರೆ ಆಗುತ್ತದೆ. ರಸ್ತೆ ಸಂಚಾರ ನಿಯಮಗಳನ್ನು ಗೌರವಿಸಿ, ಪ್ರತಿಯೊಬ್ಬರೂ ಪಾಲಿಸಬೇಕೆಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಹೇಳಿದರು.

# ನಿಷ್ಠೆಯಿಂದ ಸೇವೆ ಸಲ್ಲಿಸುವುದು ಮುಖ್ಯ



■ವಿಜಯಸಾಕ್ಷಿ ಸುದ್ದಿ, ಗದಗ

ಸಾರ್ವಜನಿಕ ಸೇವೆ ಸಲ್ಲಿಸಲು ದೊರೆತ ಅವಕಾಶವು ತಾಯಿಯ ಋಣವಿದ್ದಂತೆ. ಹೇಗೆ ತಾಯಿಯ ಋಣವನ್ನು ಏಳೇಳು ಜನ್ಮಕ್ಕೂ ತೀರಿಸಲು ಸಾಧ್ಯವಿಲ್ಲವೋ ಹಾಗೇ ಸಾರ್ವಜನಿಕ ಸೇವಾ ಸಿಬ್ಬಂದಿಯನ್ನು ಅವರ ಸೇವಾ ಅವಧಿಯಿಂದ ನಿವೃತ್ತಿವರೆಗೂ ಸಾಕಿ ಸಲಹುವ ಸರಕಾರ ಅಥವಾ ಸಂಸ್ಥೆಗಳ ಋಣ ಕೂಡಾ ತೀರಿಸಲು ಎಂದಿಗೂ ಆಗದು. ಅಂತೆಯೇ ನಿಷ್ಠೆಯಿಂದ ಸೇವೆ ಸಲ್ಲಿಸುವುದು ಕೂಡ ಅಷ್ಟೇ ಮುಖ್ಯ ಎಂದು ನಗರಸಭೆಯ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರಾದ ಎಚ್.ಎ. ಬಂಡಿವಡ್ಡರ ನುಡಿದರು.

ಅವರು ಗದಗ-ಬೆಟಗೇರಿ ನಗರಸಭೆಯ ಆರೋಗ್ಯ ವಿಭಾಗದಲ್ಲಿ ಸ್ವಚ್ಛತಾ ಮೇಲ್ವಿಚಾರಕರಾಗಿ ಸೇವಾ ನಿವೃತ್ತಿ ಹೊಂದಿದ ಯಲ್ಲಪ್ಪ ಈ.ಬೇಂದ್ರೆ ಅವರ ನಿವೃತ್ತಿ ಪ್ರಯುಕ್ತ ಬೀಳ್ಕೊಡುವ ಸಮಾರಂಭದಲ್ಲಿ ಮಾತನಾಡುತ್ತಿದ್ದರು.

ಈ ಸಂದರ್ಭದಲ್ಲಿ ಪೌರಾಯುಕ್ತರ ಶುಭ ಹಾರೈಕೆ ಸಂದೇಶದೊಂದಿಗೆ ಗದಗ-ಬೆಟಗೇರಿ ನಗರಸಭೆ, ಕರ್ನಾಟಕ ರಾಜ್ಯ ಪೌರಸೇವಾ ನೌಕರರ ಸೇವಾ ಸಂಘ ಆಶ್ರಯದಲ್ಲಿ ವಾಯ್.ಇ. ಬೇಂದ್ರೆಯವರಿಗೆ ಕಾರ್ಯಾಲಯ ವ್ಯವಸ್ಥಾಪಕ ಪರುಶುರಾಮ ಶೇರಖಾನೆ, ಪರಿಸರ ಅಭಿಯಂತರ ಆನಂದ್ ಬದಿ, ಕರ್ನಾಟಕ ರಾಜ್ಯ ಪೌರಸೇವಾ ನೌಕರರ ಸೇವಾ ಸಂಘದ ರಾಜ್ಯ ಕಾರ್ಯಾಧ್ಯಕ್ಷ ವೆಂಕಟೇಶ ರಾಮಗಿರಿ, ಎಂ.ಎನ್. ಶಾಲಗಾರ ನೇತೃತ್ವದಲ್ಲಿ ಶಾಲು ಹೊದೆಸಿ ಗೌರವಿಸಿ ಸತ್ಕರಿಸಿದರು.

ಸಮಾರಂಭದಲ್ಲಿ ನಾಗೇಶ್ ಗುರಣ್ಣವರ, ಡಿ.ಎಚ್. ಸೀತಿಮನಿ, ಎಸ್.ಎ. ಅಗಸಿಮನಿ, ಎಂ.ಆರ್. ಪಾಟೀಲ್, ಜಿ.ಕೆ. ಬಳ್ಳಾರಿ, ರಮೇಶ್ ನಾಗಲೀಕರ್, ಎ.ಎನ್. ಪುಣೇಕರ, ಎಸ್.ವಿ. ತೋಟಗಿ, ರಾಜು ಬಾಕಳೆ ಹಾಗೂ ಸರ್ವ ಸಿಬ್ಬಂದಿಗಳು ಉಪಸ್ಥಿತರಿದ್ದರು. ವೆಂಕಟೇಶ ರಾಮಗಿರಿ ಸ್ವಾಗತಿಸಿ ವಂದಿಸಿದರು.

# ಬಾಪೂಜಿ ವಿದ್ಯಾನಿಕೇತನದಲ್ಲಿ ಗ್ರಾಮೀಣ ಸಂತೆ




■ವಿಜಯಸಾಕ್ಷಿ ಸುದ್ದಿ, ರೋಣ

ಇಲ್ಲಿನ ಹೊಳೆ ಆಲೂರು ಬಾಪೂಜಿ ವಿದ್ಯಾನಿಕೇತನದಲ್ಲಿ ಹಳ್ಳಿ ಸೊಗಡು ಹಾಗೂ ಗ್ರಾಮೀಣ ಸಂತೆ ಎಂಬ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಆಗಮಿಸಿದ ನಿವೃತ್ತ ಶಿಕ್ಷಕಿ ಗುರುದೇವಿ ಮೊಕಾಶಿಮಠ್ ಮಕ್ಕಳನ್ನು ಉದ್ದೇಶಿಸಿ ಮಾತನಾಡುತ್ತಾ, ಮಕ್ಕಳಿಗೆ ಶಿಕ್ಷಣದ ಜೊತೆಗೆ ಸಾಮಾನ್ಯ ಜ್ಞಾನ ಹಾಗೂ ವ್ಯಾವಹಾರಿಕ ಕುಶಲತೆಯನ್ನು ತಿಳಿಸುವುದು ತುಂಬಾ ಅವಶ್ಯ ಎಂದರು.

ಅನುಸೂಯ ವಿಶ್ವನಾಥ್ ಬಡಿಗೇರ್, ನೇತ್ರಾವತಿ ಪತ್ತಾರ್ ಮಾತನಾಡಿ, ಮಕ್ಕಳಿಗೆ ವ್ಯಾಪಾರದ ಬಗ್ಗೆ ಹಾಗೂ ವ್ಯವಹಾರದ ಕುಶಲತೆ ಬಗ್ಗೆ ಈ ಕಾರ್ಯಕ್ರಮ ಆಯೋಜಿಸಿರುವುದಕ್ಕೆ ಸಂತಸ ವ್ಯಕ್ತಪಡಿಸಿದರು. ಶಾಲೆಯ ಎಲ್ಲ ಮಕ್ಕಳು ಗ್ರಾಮೀಣ ಸೊಗಡಿನ ವೇಷ ಭೂಷಣಗಳನ್ನು ಧರಿಸಿ ತಾವೇ ಸ್ವತಃ ವ್ಯಾಪಾರವನ್ನು ಮಾಡುತ್ತಾ ತಾವೊಬ್ಬ ಕುಶಲ ವ್ಯಾಪಾರಿ ಎಂದು ತೋರಿಸಿಕೊಟ್ಟರು. ಮಂಡಳಿ ಅಧ್ಯಕ್ಷರಾದ ಪ್ರೊ. ಮಹಾಂತೇಶ್ ಬಾತಾಖಾನಿ, ಮುಖ್ಯೋಪಾಧ್ಯಾಯೆ ಅಪರ್ಣ ಗಂಗೂರ್ ಸಹ ಶಿಕ್ಷಕಿಯರಾದ ನಾಗರತ್ನ ಅರಳಿ, ರೇಖಾ ಪಾಟೀಲ್, ಉಮಾ ಉಪ್ಪಿನ್, ಕುಮಾರಿ ಸಂಗೀತ ಬಡಿಗೇರ್, ಸಿಬ್ಬಂದಿಗಳಾದ ದೀಪಾ ಪಾಟೀಲ್, ಶರಣು ಮೊಳ ಮತ್ತು ಮಕ್ಕಳು ಭಾಗವಹಿಸಿದ್ದರು.

# ಕಾರ್ತಿಕೋತ್ಸವ ಜ್ಞಾನದ ಸಂಕೇತ

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಜ್ಞಾನದ ಸಂಕೇತವೇ ಬೆಳಕು ಎಂದು ಧಾರವಾಡ ಮುರುಘಾಮಠ ಹಾಗೂ ಮುಳಗುಂದ ಗವಿಮಠದ ಪೂಜ್ಯರಾದ ಡಾ. ಮಲ್ಲಿಕಾರ್ಜುನ ಮಾಹಾಸ್ವಾಮೀಜಿ ಹೇಳಿದರು.

ಅವರು ಪಟ್ಟಣದ ಬಾಲಲೀಲಾ ಮಾಹಾಂತ ಶಿವಯೋಗಿಗಳ ಗವಿಮಠ ಕಾರ್ತಿಕೋತ್ಸವಕ್ಕೆ ಚಾಲನೆ ನೀಡಿ ಮಾತನಾಡಿ, ಮನುಷ್ಯನ ಮನೆ-ಮನದಲ್ಲಿ ಅಡಗಿರುವ ಅಜ್ಞಾನದ ಅಂಧಕಾರವನ್ನು ತೊಲಗಿಸಿ, ಜ್ಞಾನದ ಬೆಳಕನ್ನು ನೀಡುವುದರ ಸಂಕೇತವೇ ಕಾರ್ತಿಕೋತ್ಸವವಾಗಿದೆ ಎಂದರು.

ಸಾನ್ನಿಧ್ಯವನ್ನು ನೀಲಗುಂದ ಗುದ್ನೇಶ್ವರಮಠದ ಪ್ರಭುಲಿಂಗ ದೇವರು ವಹಿಸಿದ್ದರು.



ಜಾತ್ರಾ ಸಮಿತಿ ಅಧ್ಯಕ್ಷ ಬಸವರಾಜ ಬಾತಾಖಾನಿ, ಎಂ.ಡಿ. ಬಟ್ಟೂರ, ರಾಮಣ್ಣಾ ಕಮಾಜಿ, ಕೆ.ಎಲ್. ಕರಿಗೌಡರ, ಎಸ್.ಸಿ. ಬಡ್ನಿ, ಮಾಹಾಂತಪ್ಪ ನೀಲಗುಂದ, ಮಾಹಾದೇವಪ್ಪ ಗಡಾದ, ಸಿದ್ದಲಿಂಗೇಶ ಕುರ್ತಕೋಟಿ, ಶಿವಬಸವ ಹಸಬಿ, ಮಾಹಾಂತೇಶ ಕೋರಿ, ಅನೂಪ ಕೆಂಚನಗೌಡರ ಸೇರಿದಂತೆ ಗವಿಮಠದ ಸದ್ಭಕ್ತರು ಇದ್ದರು.

# ‘ಚೈತ್ಯಭೂಮಿ ಚಲೋ’ ಕಾರ್ಯಕ್ರಮಕ್ಕೆ ಚಾಲನೆ

■ವಿಜಯಸಾಕ್ಷಿ ಸುದ್ದಿ, ಗದಗ

ಡಾ. ಬಿ.ಆರ್. ಅಂಬೇಡ್ಕರರ 68ನೇ ಮಹಾಪರಿನಿರ್ವಾಣದ ನಿಮಿತ್ತ ಡಾ. ಬಿ.ಆರ್. ಅಂಬೇಡ್ಕರ ಜ್ಞಾನ ಪ್ರಸಾರ ಕೇಂದ್ರ ಸಮಿತಿ, ಕರ್ನಾಟಕ ರಕ್ಷಣಾ ವೇದಿಕೆ ಗದಗ ಇವರ ಸಂಯುಕ್ತ ಆಶ್ರಯದಲ್ಲಿ ಮಂಗಳವಾರ ಗದಗ-ಬೆಟಗೇರಿ ನಗರಸಭೆ ಆವರಣದಲ್ಲಿರುವ ಡಾ. ಬಿ.ಆರ್. ಅಂಬೇಡ್ಕರರ ಪುತ್ಥಳಿಗೆ ಮಾಲಾರ್ಪಣೆ ಮಾಡುವ ಮೂಲಕ ಚೈತ್ಯಭೂಮಿ (ಮುಂಬೈ-ದಾದರ್) ಚಲೋ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವವರಿಗೆ ಬೀಳ್ಕೊಡಲಾಯಿತು.

ಈ ಸಂದರ್ಭದಲ್ಲಿ ವೆಂಕಟೇಶ ಬೇಲೂರ ಮಾತನಾಡಿ, ನಮ್ಮ ಸಮಿತಿ 28 ವರ್ಷಗಳಿಂದ ಸತತವಾಗಿ ಸೇವೆ ಮಾಡುತ್ತ, ಸಕಲ ದಲಿತ



ಬಂಧುಗಳಿಗೆ ಸದರಿ ಸಮಿತಿ ಚೈತ್ಯಭೂಮಿ (ಮುಂಬೈ-ದಾದರ್) ಚಲೋ ಕಾರ್ಯಕ್ರಮ ಹಮ್ಮಿಕೊಳ್ಳುತ್ತಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಯಲ್ಲಪ್ಪ ತೇರದಾಳ, ಶ್ರೀನಿವಾಸ ಭಂಡಾರಿ, ದಾವಲಸಾಬ ಮುಳಗುಂದ, ಮಹೇಶ ದಾಸರ, ತಿಮ್ಮಣ್ಣ ಡೋಣಿ, ಹನಮಂತಸಾ ಶಿದ್ಲಿಂಗ, ಮಂಜುನಾಥ ಬಾಗಿ, ಮೈಲಾರಪ್ಪ ಕೊಟೆಪ್ಪನವರು, ಮಂಜುನಾಥ ಗುರ್ಲಹೊಸೂರ, ಶಿವಾಜಿ ಚವ್ಹಾಣ, ಸಹದೇವ ಕೋಟಿ, ಮಣಿಕಂಠ ಭಂಡಾರಿ, ಮಂಜುನಾಥ ಶಾಂತಗೇರಿ, ಮಲ್ಲಯ್ಯ ಜಂಗಳಿಮಠ, ಅನಿಲ ಖಟವಟೆ ಮುಂತಾದವರು ಭಾಗವಹಿಸಿದ್ದರು.

### ‘ಪುಣ್ಯಕೋಟಿ’ ರೂಪಕ ಪ್ರದರ್ಶನ ಉದ್ಘಾಟಿಸಿದ ರಂಗಾಯಣ ನಿರ್ದೇಶಕ ರಾಜು ತಾಳಿಕೋಟಿ

# ಮಕ್ಕಳ ಮನೋವಿಕಾಸಕ್ಕೆ ನಾಟಕ ಪೂರಕ

■ವಿಜಯಸಾಕ್ಷಿ ಸುದ್ದಿ, ಗದಗ

ನಟರಂಗ ಸಾಂಸ್ಕೃತಿಕ ಕೇಂದ್ರ ಗದಗ, ತೋಂಟದಾರ್ಯ ಕಲಾ ರಂಗ ಹಾಗೂ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಗದಗ ಇವರ ಸಂಯುಕ್ತ ಆಶ್ರಯದಲ್ಲಿ ನಗರದ ಶ್ರೀ ಜಗದ್ಗುರು ಶ್ರೀ ತೋಂಟದಾರ್ಯ ಮಠದ ಆವರಣದಲ್ಲಿ ‘ಪುಣ್ಯಕೋಟಿ’ ರೂಪಕವನ್ನು ಹಮ್ಮಿಕೊಳ್ಳಲಾಗಿತ್ತು.

ಧಾರವಾಡ ರಂಗಾಯಣ ನಿರ್ದೇಶಕರಾದ ರಾಜು ತಾಳಿಕೋಟಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿ, ಮಕ್ಕಳಲ್ಲಿ ಹುದುಗಿರುವ ನಾಟಕ ಕೌಶಲ್ಯಕ್ಕೆ ಇಂಬುಕೊಡುವ ನಿಟ್ಟಿನಲ್ಲಿ ನಟರಂಗ ಕಾರ್ಯಪ್ರವೃತ್ತವಾಗಿದೆ. ಮಕ್ಕಳ ಮನೋವಿಕಾಸಕ್ಕೆ ನಾಟಕ ಪೂರಕ ಮತ್ತು ಪೋಷಕವಾಗಿವೆ.



ಮೌಲ್ಯಗಳನ್ನು ಬೆಳೆಸುವ ನಿಟ್ಟಿನಲ್ಲಿ ಪ್ರಭಾವಶಾಲಿಯಾಗಿದೆ. ಇಂತಹ ರೂಪಕಗಳನ್ನು ತಮ್ಮ ಕುಟುಂಬ ಹಾಗೂ ಸ್ನೇಹಿತರೊಂದಿಗೆ ವೀಕ್ಷಿಸಬೇಕೆಂದು ಕಿವಿಮಾತು ಹೇಳಿದರು.

ಈ ಮುದ್ದು ಮಕ್ಕಳು ಇಂತಹ ರೂಪಕಗಳಲ್ಲಿ ಪಾಲ್ಗೊಂಡು ತಮ್ಮ ಅಭಿನಯವನ್ನು ಪ್ರಸ್ತುತಪಡಿಸಿರುವುದು ಶ್ಲಾಘನೀಯವಾಗಿದೆ. ಮಕ್ಕಳು ಮೊಬೈಲ್ ಗೀಳು ಬಿಟ್ಟು ನಾಟಕ, ರೂಪಕಗಳನ್ನು ನೋಡುವಂತೆ ಈ ಎಲ್ಲಾ ಶಾಲಾ ಕಾಲೇಜುಗಳಲ್ಲಿ ಆಯೋಜನೆ ಮಾಡಬೇಕಿದೆ. ಗದಗ ಜಿಲ್ಲೆಯು ಸಾಂಸ್ಕೃತಿಕ ಕೇಂದ್ರವಾಗಿದ್ದು, ಪದ್ಮಭೂಷಣ ಲಿಂ ಡಾ. ಪುಟ್ಟರಾಜ ಕವಿಗವಾಯಿಗಳು, ಭಾರತ ರತ್ನ ಭೀಮಸೇನ ಜೋಶಿಯವರು ಗದಗ ಜಿಲ್ಲೆಯನ್ನು ರಾಷ್ಟ್ರಮಟ್ಟಕ್ಕೆ ಪರಿಚಯಿಸಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಡಾ. ಜಿ.ಬಿ. ಪಾಟೀಲ್, ವಿವೇಕಾನಂದಗೌಡ ಪಾಟೀಲ್, ಪ್ರೊ. ಕೆ.ಎಚ್. ಬೇಲೂರ, ಶ್ರೀನಿವಾಸ್ ಹುಯಿಲಗೋಳ, ಚನ್ನವೀರಶಾಸ್ತ್ರಿ ಖಡಣಿ, ವಿಜಯಕುಮಾರ ಹಿರೇಮಠ, ಪ್ರೊ. ಬಾಹುಬಲಿ ಜೈನರ, ಅಜಿತ್ ಘೋರ್ಪಡೆ, ರಂಗಾಯಣದ ಕೇಶವ್ ಬಡಿಗೇರ್, ಸೋಮಶೇಖರ್ ಚಿಕ್ಕಮಠ, ಪೂಜಾ ಸೋಮಶೇಖರ್ ಚಿಕ್ಕಮಠ, ಬಸವರಾಜ ಮುಖಂಡಮಠ, ನಾಗರಾಜ ಮಿಸಾಳ, ನಾಗರಾಜ ಬಡಿಗೇರ, ಅಕ್ಷತಾ ಹಿರೇಮಠ, ಜ್ಯೋತಿ ಅಲ್ಲುಂದಿ, ಮಹಾಂತೇಶ ಹೂಗಾರ, ಸಂತೋಷ ಜಾಲಿಯಾಳ, ಪುಣ್ಯಕೋಟಿ ನಾಟಕದ ನಿರ್ದೇಶಕ ಮಾಂತೇಶ್ ಗಜೇಂದ್ರಗಡ ಉಪಸ್ಥಿತರಿದ್ದರು.

ಕರ್ನಾಟಕ ಸರ್ಕಾರ
ಜಿಲ್ಲಾಪಂಚಾಯತ್, ಗದಗ
ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆ
ಸಹಾಯಕ ನಿರ್ದೇಶಕರವರ ಕಛೇರಿ, ಕೆ.ಎಚ್. ಪಾಟೀಲ ಕ್ರೀಡಾಂಗಣ, ಗದಗ-582101
E-mail dyssogadag@gmail.com Phone/Tel fax : 08372-238345

ಸಂಖ್ಯೆ:ಸನಿ/ಯುಸೇಕ್ರೀಇ/ಗದಗ/ಸಿಆರ್- 40/2024-25 ದಿನಾಂಕ: 03-12-2024

ವಾಣಿಜ್ಯ ಮಳಿಗೆಗಳ ಬಹಿರಂಗ ಹರಾಜು ಟೆಂಡರ್ ಪ್ರಕಟಣೆ

ಈ ಮೂಲಕ ಸಮಸ್ತ ವ್ಯಾಪಾರಸ್ಥರು ಹಾಗೂ ಸಾರ್ವಜನಿಕರಿಗೆ ತಿಳಿಯಪಡಿಸುವುದೇನೆಂದರೆ, ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದ ಆವರಣದಲ್ಲಿರುವ ವಿವಿಧ ಅಳತೆಯ 21 ವಾಣಿಜ್ಯ ಮಳಿಗೆಗಳನ್ನು ಇದ್ದ ಸ್ಥಿತಿಯಲ್ಲಿಯೇ ನಗರಾಭಿವೃದ್ಧಿ ಇಲಾಖೆ, ಬೆಂಗಳೂರುರವರ ಸುತ್ತೋಲೆ ಸಂಖ್ಯೆ: ನಅಇ/301 ಜಿಇಎಲ್/2017 ದಿನಾಂಕ: 19-07-2019 ರಡಿ 12ವರ್ಷಗಳ ಅವಧಿಗೆ ಬಹಿರಂಗ ಹರಾಜು ಮಾಡಿ ಭಾಡಿಗೆ ನಿಗದಿ ಮಾಡುವ ಮೂಲಕ ವಿಲೇವಾರಿ ಮಾಡಲು ಹರಾಜು ಪ್ರಕ್ರಿಯೆ ಮಾಡಲಾಗುತ್ತಿದೆ. ಹೆಚ್ಚಿನ ವಿವರ/ ಮಾಹಿತಿಗಾಗಿ ಸಹಾಯಕ ನಿರ್ದೇಶಕರು, ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದ ಆವರಣ, ಗದಗ ಇವರನ್ನುಕಛೇರಿ ಸಮಯದಲ್ಲಿ ಸಂಪರ್ಕಿಸಿ ಪಡೆಯಬಹುದು. ಸಂಪರ್ಕಿಸಬೇಕಾದ ದೂರವಾಣಿ ಸಂಖ್ಯೆ: 08372-238345

ವಾಣಿಜ್ಯ ಮಳಿಗೆಗಳ ಬಹಿರಂಗ ಹರಾಜು ವಿವರಗಳು

| | | |
|---|---|---|
| 1 | ವಾಣಿಜ್ಯ ಮಳಿಗೆಗಳ ಸಂಖ್ಯೆ | 21 |
| 2 | ಬಹಿರಂಗ ಹರಾಜು ಪ್ರಕಟಣೆಯ ದಿನಾಂಕ | 04-12-2024 |
| 3 | ಭರ್ತಿ ಮಾಡಿದ ಅರ್ಜಿಗಳನ್ನು (ಮಳಿಗೆ ಸಂಖ್ಯೆಯೊಂದಿಗೆ ಠೇವಣಿ ಮೊತ್ತ ಹಾಗೂ ಅಗತ್ಯದಾಖಲೆಗಳು) ಸಲ್ಲಿಸುವ ಕೊನೆಯ ದಿನಾಂಕ: | 18-12-2024 ಸಂಜೆ 5.30 ಗಂಟೆ ಒಳಗಾಗಿಸಲ್ಲಿಸಬೇಕು. |
| 4 | Right of First Refusal (ಮೊದಲ ನಿರಾಕರಣೆಯ ಹಕ್ಕು)ನ್ನು ಆಯ್ಕೆ ಮಾಡಿಕೊಂಡಲ್ಲಿ ಲಿಖಿತವಾಗಿ ತಿಳಿಸಲು ಕೊನೆಯ ದಿನಾಂಕ: | 20-12-2024 ಸಂಜೆ 5.30 ಗಂಟೆ ಒಳಗಾಗಿ ಲಿಖಿತವಾಗಿ ಸಲ್ಲಿಸಬೇಕು. |
| 5 | ಮಳಿಗೆ ಹರಾಜು ಪೂರ್ವಭಾವಿ ಸಭೆ | ದಿ: 21-12-2024 ಮಧ್ಯಾಹ್ನ 3.30 ಗಂಟೆಗೆ |
| 6 | ಮಳಿಗೆಗಳನ್ನು ಬಹಿರಂಗ ಲಿಲಾವು ಮಾಡುವ ದಿನಾಂಕ ಹಾಗೂ ಸಮಯ: | 23-12-2023 ಬೆಳಿಗ್ಗೆ 11.00 ಗಂಟೆಗೆ |
| 7 | ಮಳಿಗೆಗಳನ್ನು ಬಹಿರಂಗ ಹರಾಜು ಮಾಡುವ ಸ್ಥಳ: | ಕೆ.ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣದ ಆವರಣದಲ್ಲಿರುವ ಕುಸ್ತಿ ಮನೆ, ಗದಗ |

ವಾ.ಸಾ.ಇ/ಗದಗ/433/ದೇಶಪಾಂಡೆಪಬ್ಲಿಸಿಟಿ/2024-25

ಸಹಿ/- ಸಹಾಯಕ ನಿರ್ದೇಶಕರು
ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆ ಗದಗ

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka